ಸಂಪಾದಕರು: ರವಿಕುಮಾರ್ ಸಿ.ಹೆಚ್.

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily

ಪ್ರತಿ ಸುದ್ಧಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 Issue:87 Date:17-04-2026 Friday RNI NO : KARKAN/2021/80805 L2/RNP-1285/TMR/2025-27 Page :4 Price: 1.00

ಸಂಪುಟ: 05 ಸಂಚಿಕೆ: 87 ಪುಟ : 4 ಬೆಲೆ: 1.00 ರೂ

## ಮುಂಗಾರಿನಲ್ಲಿ ಕಡಿಮೆ ಮಳೆ–ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ–ಸಿಎಂ

ರಾಜ್ಯದ ಐದು ಜಿಲ್ಲೆಗಳನ್ನು ಹೊರತುಪಡಿಸಿ ಬೇರೆ ಎಲ್ಲಾ ಜಿಲ್ಲೆಗಳಲ್ಲಿ ಮುಂಗಾರು ಕೊರತೆ ನಿರೀಕ್ಷಿಸಲಾಗಿದ್ದು, ಕುಡಿಯುವ ನೀರಿಗೆ ತೊಂದರೆಯಾಗದಂತೆ ಜಿಲ್ಲಾಧಿಕಾರಿಗಳು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಈ ವರ್ಷ ಮುಂಗಾರಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆಯಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಗಸ್ಟ್ ತಿಂಗಳಲ್ಲಿ ವಾಡಿಕೆ ಮಳೆಯಾಗುವ ಸಾಧ್ಯತೆಯಿದ್ದು, ಸೆಪ್ಟೆಂಬರ್ ತಿಂಗಳಲ್ಲಿ ಮಳೆ ಕಡಿಮೆ ನಿರೀಕ್ಷಿಸಲಾಗಿದೆ ಎಂದರು.

ಈ ಬಾರಿ ಎಪ್ರಿಲ್–ಜೂನ್ ಅವಧಿಯಲ್ಲಿ ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಬಿಸಿಗಾಳಿ ದಿನಗಳು ಕಂಡು ಬರುವ ಸಾಧ್ಯತೆಯಿದೆ. ಇಂತಹ ಸಂದರ್ಭದಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಹವಾಮಾನ ಇಲಾಖೆಯ ಮುನ್ಸೂಚನೆಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಹೇಳಿದ್ದಾರೆ.

ಸಾರ್ವಜನಿಕರಿಗೆ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರು ಪೂರೈಕೆಯನ್ನು ಖಾತ್ರಿಪಡಿಸಲು



ಯಾವುದೇ ಅನುದಾನದ ಕೊರತೆಯಿಲ್ಲ. ಜಿಲ್ಲಾಧಿಕಾರಿಗಳ ವರದಿ ಆಧಾರದಲ್ಲಿ ಅಗತ್ಯ ಅನುದಾನವನ್ನು ಒದಗಿಸಲು ಹಣಕಾಸು ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸಬಹುದಾದ 213 ತಾಲೂಕುಗಳನ್ನು ಹಾಗೂ 2,410 ಗ್ರಾಮ ಪಂಚಾಯತ್ ಗಳನ್ನು ಗುರುತಿಸಲಾಗಿದೆ. ಪ್ರಸ್ತುತ 114 ತಾಲೂಕುಗಳ 598 ಗ್ರಾಮ ಪಂಚಾಯತ್ ಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. 137 ಗ್ರಾಮಗಳಿಗೆ ಒಟ್ಟು 129 ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. 585 ಖಾಸಗಿ ಬೋರ್ ವೆಲ್ ಗಳನ್ನು ಬಾಡಿಗೆಗೆ ಪಡೆಯಲಾಗಿದ್ದು, ಇದರ ಮೂಲಕ 515 ಗ್ರಾಮಗಳಿಗೆ ನೀರು ಪೂರೈಕೆ ಮಾಡಲಾಗುತ್ತಿದೆ.

ಕಲಬುರಗಿ ಜಿಲ್ಲೆಯ 147 ಗ್ರಾಮ ಪಂಚಾಯತ್, ಬಾಗಲಕೋಟೆ 114, ಬೆಳಗಾವಿಯ 127, ಚಿಕ್ಕಮಗಳೂರಿನ 115, ಹಾವೇರಿಯ 138, ಮಂಡ್ಯ 130, ತುಮಕೂರಿನ 141 ಹಾಗೂ ಉತ್ತರಕನ್ನಡ ಜಿಲ್ಲೆಯ 125 ಗ್ರಾಮ ಪಂಚಾಯತ್ ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೆಂದು ಗುರುತಿಸಲಾಗಿದೆ ಎಂದು ಹೇಳಿದರು.

ಮಳೆಗಾಲ ವಿಳಂಬವಾಗಿ ಆರಂಭವಾಗುವ ಸಾಧ್ಯತೆಯಿರುವುದರಿಂದ ಜುಲೈ ಮಧ್ಯದವರೆಗೂ ಕುಡಿಯುವ ನೀರಿಗಾಗಿ ಜಲಾಶಯಗಳಲ್ಲಿ ನೀರಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು. ನೀರಾವರಿಗಿಂತ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಜಲಾಶಯಗಳಲ್ಲಿ ನೀರಿನ ಸೋರಿಕೆಯನ್ನು ಗುರುತಿಸಿ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದರು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ: 9901010109

## ಪೂರ್ವ ಮುಂಗಾರು ಹಂಗಾಮಿನ ಸ್ಥಿತಿ, ವಿಪತ್ತು ನಿರ್ವಹಣೆ ಹಾಗೂ ಕೃಷಿ ಸಿದ್ಧತೆ ಕುರಿತು ಡಿಸಿ ಸಭೆ

ತುಮಕೂರು ಜಿಲ್ಲೆಯ 2026 ಪೂರ್ವ ಮುಂಗಾರು ಹಂಗಾಮಿನ ಸ್ಥಿತಿ, ವಿಪತ್ತು ನಿರ್ವಹಣೆ ಹಾಗೂ ಕೃಷಿ ಸಿದ್ಧತೆ ಕುರಿತು ಸಮಗ್ರ ವರದಿ 2026ರ ಪೂರ್ವ ಮುಂಗಾರು ಹಂಗಾಮಿನಲ್ಲಿ ತುಮಕೂರು ಜಿಲ್ಲೆಯಲ್ಲಿ ಸಾಧಾರಣ ಮಳೆಯಾಗಿದೆ. ವಾಡಿಕೆ ಮಳೆ 21.7 ಮಿಮೀ ಇದ್ದರೆ, ವಾಸ್ತವವಾಗಿ 23.8 ಮಿಮೀ ಮಳೆ ದಾಖಲಾಗಿದ್ದು, ಸುಮಾರು 10% ಹೆಚ್ಚಳ ಕಂಡುಬಂದಿದೆ. ಈ ಅವಧಿಯಲ್ಲಿ ಯಾವುದೇ ಮಾನವ ಅಥವಾ ಪಶುಹಾನಿ ಸಂಭವಿಸಿಲ್ಲ. ಜೊತೆಗೆ ಸರ್ಕಾರದ ಕಟ್ಟಡಗಳು, ಸೇತುವೆಗಳು ಹಾಗೂ ಹೆದ್ದಾರಿಗಳಿಗೆ ಯಾವುದೇ ಹಾನಿ ಉಂಟಾಗಿಲ್ಲ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಮಳೆ ಹಾಗೂ ಆಲಿಕಲ್ಲು ಮಳೆಯಿಂದ ಶಿರಾ, ತಿಪಟೂರು ಮತ್ತು ಚಿಕ್ಕನಾಯಕನಹಳ್ಳಿ ತಾಲ್ಲೂಕುಗಳಲ್ಲಿ ಕೆಲವು ಬೆಳೆ ಹಾನಿ ಸಂಭವಿಸಿದೆ. ಶಿರಾ ತಾಲ್ಲೂಕಿನ ತಡಕಲೂರು ಗ್ರಾಮದಲ್ಲಿ ಇಬ್ಬರು ರೈತರ 2.00 ಹೆಕ್ಟೇರ್ ಜೋಳದ ಬೆಳೆ ಹಾನಿಗೊಳಗಾಗಿದೆ. ತೋಟಗಾರಿಕೆ ಬೆಳೆಗಳಲ್ಲಿ ಶಿರಾ ತಾಲ್ಲೂಕಿನ ಹುಲಿಕುಂಟೆ ಹೋಬಳಿಯ ತಡಕಲೂರು ಮತ್ತು ಹಂದಿಕುಂಟೆ ಗ್ರಾಮ ಪಂಚಾಯಿತಿಗಳಲ್ಲಿ ಒಟ್ಟು 840 ರೈತರ 538.27 ಹೆಕ್ಟೇರ್ ಪ್ರದೇಶದಲ್ಲಿ ಹಾನಿ ವರದಿಯಾಗಿದೆ. ಇದರಲ್ಲಿ ದಾಳಿಂಬೆ ಬೆಳೆ ಹೆಚ್ಚಿನ ಪ್ರಮಾಣದಲ್ಲಿ ಹಾನಿಗೊಳಗಾಗಿದೆ. ರೇಷ್ಮೆ ಬೆಳೆಗಳಲ್ಲಿ 23 ರೈತರ 18.51 ಹೆಕ್ಟೇರ್ ಪ್ರದೇಶದಲ್ಲಿ ಹಾನಿ ಸಂಭವಿಸಿದ್ದು,




ಎಲ್ಲಾ ವಿವರಗಳನ್ನು ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ.

ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲೆಯ 73 ಗ್ರಾಮ ಪಂಚಾಯಿತಿಗಳ 109 ಗ್ರಾಮಗಳಲ್ಲಿ ಸಮಸ್ಯೆ ಕಾಣಿಸಿಕೊಂಡಿದೆ. ಕೆಲವು ಗ್ರಾಮಗಳಿಗೆ ಖಾಸಗಿ ಟ್ಯಾಂಕರ್‌ಗಳು, ಬೋರ್‌ವೆಲ್‌ಗಳು ಹಾಗೂ ಪರ್ಯಾಯ ವ್ಯವಸ್ಥೆಗಳ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಜೂನ್ 2026ರವರೆಗೆ ಎದುರಾಗಬಹುದಾದ ಸಮಸ್ಯೆಯನ್ನು ಮನಗಂಡು, 141 ಗ್ರಾಮ ಪಂಚಾಯಿತಿಗಳ 194 ಗ್ರಾಮಗಳಿಗೆ 578.90 ಲಕ್ಷ ರೂ.ವೆಚ್ಚದಲ್ಲಿ ತುರ್ತು ಕಾರ್ಯಯೋಜನೆ ರೂಪಿಸಲಾಗಿದೆ. ನಗರ ಪ್ರದೇಶಗಳಲ್ಲಿ ಬುಗುಡನಹಳ್ಳಿ ಕೆರೆಯಲ್ಲಿ ಸಂಗ್ರಹಿತ ನೀರು ಒಂದು ತಿಂಗಳಿಗೆ ಸಾಕಾಗಲಿದ್ದು, ಹೆಚ್ಚುವರಿ ನೀರಿಗಾಗಿ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಕುಡಿಯುವ ನೀರಿನ ಗುಣಮಟ್ಟ ಪರಿಶೀಲನೆಗಾಗಿ ವ್ಯಾಪಕ ಪರೀಕ್ಷೆಗಳು ನಡೆಸಲಾಗಿದೆ. ಸಾವಿರಾರು ಮಾದರಿಗಳಲ್ಲಿ ಕಲುಷಿತತೆ ಪತ್ತೆಯಾಗಿದ್ದು, ಬಹುತೇಕ ಪ್ರಕರಣಗಳಲ್ಲಿ ತಕ್ಷಣ ಕ್ರಮ ಕೈಗೊಳ್ಳಲಾಗಿದೆ. ಆರೋಗ್ಯ ಮತ್ತು ಸಂಬಂಧಿತ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿವೆ ಎಂದರು.

ಕೃಷಿ ಇಲಾಖೆಯಿಂದ 2026ರ ಮುಂಗಾರು ಹಂಗಾಮಿಗೆ 3.11 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ನಿಗದಿಪಡಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಪೂರ್ವ ಮುಂಗಾರು ಹಂಗಾಮು ಮತ್ತು ಮುಂಗಾರು ಹಂಗಾಮಿಗೆ 18143.52 ಕ್ವಿಂಟಾಲ್‌ಗಳಷ್ಟು ಬಿತ್ತನೆ ಬೀಜದ ಬೇಡಿಕೆಯಿದ್ದು, ವಿವಿಧ ಬೆಳೆಗಳಿಗೆ ಅಗತ್ಯ ಬೀಜ ಮತ್ತು ರಸಗೊಬ್ಬರವನ್ನು ಸಮರ್ಪಕವಾಗಿ ಸಂಗ್ರಹಿಸಲಾಗಿದ್ದು, ರೈತರಿಗೆ ಯಾವುದೇ ಕೊರತೆ ಆಗದಂತೆ ಜಿಲ್ಲೆಯಲ್ಲಿ 50 ರೈತ ಸಂಪರ್ಕ ಕೇಂದ್ರಗಳಿದ್ದು, ಬಿತ್ತನೆ ಬೀಜ ವಿತರಿಸಲಾಗುವುದು ಹಾಗೂ ಹೆಚ್ಚುವರಿಯಾಗಿ 12 ಮಾರಾಟ ಕೇಂದ್ರಗಳಲ್ಲಿ ಬೀಜಗಳ ವಿತರಣಾ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಪಶುಪಾಲನಾ ಇಲಾಖೆಯ ಪ್ರಕಾರ, ಜಿಲ್ಲೆಯಲ್ಲಿ ಪ್ರಸ್ತುತ 36 ವಾರಗಳಿಗೆ ಸಾಕಾಗುವಷ್ಟು ಮೇವು ಲಭ್ಯವಿದೆ. ಇನ್ನು ರಾಗಿ ಖರೀದಿ ಕುರಿತು, 2025–26ನೇ ಸಾಲಿನಲ್ಲಿ 11 ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ಪ್ರತಿ ಕ್ವಿಂಟಾಲ್‌ಗೆ 4,886 ರೂ.ಬೆಲೆ ನಿಗದಿಯಾಗಿದೆ. ಇದುವರೆಗೆ 33,043 ರೈತರಿಂದ 7,85,889 ಕ್ವಿಂಟಾಲ್ ರಾಗಿ ಖರೀದಿ ಮಾಡಲಾಗಿದ್ದು, ಉಳಿದ ರೈತರಿಂದ ಖರೀದಿ ಕಾರ್ಯವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲು ಬ್ಯಾಲೆಟ್ ಪೇಪರ್ ಬಳಕೆ; ವಿಧೇಯಕಕ್ಕೆ ರಾಜ್ಯಪಾಲರ ಅಂಕಿತ

ಬೆಂಗಳೂರು: ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ವಿದ್ಯುನ್ಮಾನ ಮತ ಯಂತ್ರ (ಇವಿಎಂ) ಬದಲು ಮತಪತ್ರ ಬಳಕೆಗೆ ಅವಕಾಶ ಕಲ್ಪಿಸುವ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಅಂಕಿತ ಹಾಕಿದ್ದಾರೆ.

ವಿಧಾನಮಂಡಲ ಅಧಿವೇಶನದ ವೇಳೆ ವಿರೋಧ ಪಕ್ಷಗಳ ವಿರೋಧದ ನಡುವೆಯೂ ವಿಧೇಯಕಕ್ಕೆ ಅನುಮೋದನೆ ಪಡೆಯಲಾಗಿತ್ತು. ಅದಾದ ನಂತರ ರಾಜ್ಯಪಾಲರು ಉಳಿದೆಲ್ಲ ವಿಧೇಯಕಗಳಿಗೆ ಅನುಮೋದನೆ ನೀಡಿದ್ದರೂ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕಕ್ಕೆ ಒಪ್ಪಿಗೆ ನೀಡದೇ ತಮ್ಮ ಬಳಿಯಲ್ಲೇ ಉಳಿಸಿಕೊಂಡಿದ್ದರು. ಇದೀಗ ವಿಧೇಯಕವನ್ನು ಕೂಲಂಕಷವಾಗಿ ಪರಿಶೀಲಿಸಿ ರಾಜ್ಯಪಾಲರು ಅನುಮೋದಿಸಿದ್ದು, ಆ ಹಿನ್ನೆಲೆಯಲ್ಲಿ ರಾಜ್ಯಪತ್ರ ಪ್ರಕಟಿಸಲಾಗಿದೆ.





ಸಂವಿಧಾನದ 326ನೇ ವಿಧಿಯಂತೆ ಮುಕ್ತ, ನ್ಯಾಯಸಮ್ಮತ ಮತ್ತು ಪಾರದರ್ಶಕ ರೀತಿಯಲ್ಲಿ ಚುನಾವಣೆ ನಡೆಯಬೇಕು. ಪ್ರಮುಖವಾಗಿ ಮತದಾರರ ಮತಪತ್ರ ಗೌಪ್ಯತೆ ಖಚಿತಪಡಿಸಿಕೊಳ್ಳಲು ಮತ್ತು ಗ್ರಾಮ ಪಂಚಾಯಿತಿ ಸೇರಿದಂತೆ ಇತರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತದಾರರ ಮೇಲೆ ದಬ್ಬಾಳಿಕೆ, ಬೆದರಿಕೆ ಹಾಗೂ ಅನಗತ್ಯ ಪ್ರಭಾವ ಬೀರುವುದರಿಂದ ರಕ್ಷಿಸುವುದನ್ನು ವಿಧೇಯಕದಲ್ಲಿ ಉಲ್ಲೇಖಿಸಲಾಗಿದೆ. ಜತೆಗೆ ಮತದಾರರ ಮೇಲೆ ದಬ್ಬಾಳಿಕೆ, ಪ್ರಭಾವ ಬೀರುವವರ ವಿರುದ್ಧ ಕ್ರಮ ಕೈಗೊಳ್ಳುವ ಅಂಶವನ್ನೂ ವಿಧೇಯಕದಲ್ಲಿ ಸೇರಿಸಲಾಗಿದೆ.

ಪ್ರಮುಖವಾಗಿ ಇವಿಎಂ ಕಾರ್ಯನಿರ್ವಹಣೆಯ ಕುರಿತು ಸಾಕಷ್ಟು ಅನುಮಾನಗಳು ವ್ಯಕ್ತವಾಗುತ್ತಿದ್ದು, ಚುನಾವಣೆ ಮೇಲೆ ನಂಬಿಕೆ ಮರುಸ್ಥಾಪಿಸಲು ಸದೃಢ ರಹಸ್ಯ ಮತದಾನ ಪದ್ಧತಿಗೆ ಮರಳುವುದು ಅವಶ್ಯಕ ಎಂದೂ ತಿದ್ದುಪಡಿ ವಿಧೇಯಕದಲ್ಲಿ ತಿಳಿಸಲಾಗಿದೆ. ಜಿಲ್ಲಾ ಪಂಚಾಯತಿಯ ಪ್ರತಿ ಮತ ಕ್ಷೇತ್ರದಲ್ಲಿ ರಾಜ್ಯ ಚುನಾವಣಾ ಆಯೋಗದ ಮೇಲ್ವಿಚಾರಣೆ, ನಿರ್ದೇಶನ ಮತ್ತು ನಿಯಂತ್ರಣಕ್ಕೆ ಒಳಪಟ್ಟು ಉಪವಿಭಾಗಾಧಿಕಾರಿ ಮತದಾರರ ಪಟ್ಟಿ ಸಿದ್ಧಪಡಿಸಬೇಕು ಎಂಬ ಅಂಶವಿದೆ. ಈವರೆಗೆ ರಾಜ್ಯ ಚುನಾವಣಾ ಆಯುಕ್ತರ ನಿಗಾದಲ್ಲಿ ಮತದಾನದ ಪಟ್ಟಿ ಸಿದ್ಧಪಡಿಸಲಾಗುತ್ತಿತ್ತು. ಈಗ ತಿದ್ದುಪಡಿ ವಿಧೇಯಕದಲ್ಲಿ ಆ ಹೊಣೆಯನ್ನು ಉಪ ವಿಭಾಗಾಧಿಕಾರಿಗಳಿಗೆ ನೀಡಲಾಗಿದೆ.

## ಸರ್ಕಾರಿ ಆಸ್ಪತ್ರೆಯ ಅವ್ಯವಸ್ಥೆ ಬಗ್ಗೆ ಮಾದರ ಮಹಾಸಭಾ ಬೇಸರ; ಆಡಳಿತ ವೈದ್ಯಾಧಿಕಾರಿ ವಿರುದ್ಧ ಕ್ರಮಕ್ಕೆ ಆಗ್ರಹ



ಪಾವಗಡ: ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಿ ನಿರ್ಮಾಣ ಮಾಡಿರುವ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಔಷಧಿ, ಮೂಲಭೂತ ಸೌಕರ್ಯಗಳ ಕೊರತೆಯಿಂದ ಬಡ ರೋಗಿಗಳು ಪರದಾಡುವಂತಾಗಿದೆ ಎಂದು ಕರ್ನಾಟಕ ಮಾದರ ಮಹಾಸಭಾ ಪದಾಧಿಕಾರಿಗಳು ಬೇಸರ ವ್ಯಕ್ತಪಡಿಸುತ್ತಾ ತಹಶೀಲ್ದಾರ್ ವೈ.ರವಿ ಅವರಿಗೆ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಗುರುವಾರ ಮನವಿ ಸಲ್ಲಿಸಿದರು.

ಇಲ್ಲಿನ ಸರ್ಕಾರಿ ಆಸ್ಪತ್ರೆಯಲ್ಲಿ ಸಾಮಾನ್ಯ ಖಾಯಿಲೆಗಳಿಗೂ ಔಷಧಿ ಸಿಗುತ್ತಿಲ್ಲ. ಹೊರರೋಗಿಗಳಿಗೆ ಚಿಕ್ಕಪುಟ್ಟ ಆರೋಗ್ಯ ಸಮಸ್ಯೆಗಳಾದ ಜ್ವರ, ಕೆಮ್ಮು, ನೆಗಡಿ ಮತ್ತು ವಾಂತಿ, ಭೇದಿ ಇತ್ಯಾದಿಗೂ ಔಷಧಿ ದಾಸ್ತಾನು ಇಲ್ಲ ಎನ್ನುತ್ತಾರೆ ಔಷಧಿ ವಿತರಕರು.ಒಳರೋಗಿಯಾಗಿ ದಾಖಲಾದವರಿಗೆ ಹಲವು ಬಗೆಯ ಇಂಜೆಕ್ಷನ್, ಇತರ ಔಷಧಿ ತೆಗೆದುಕೊಳ್ಳುವಂತೆ ವೈದ್ಯರು ಸೂಚಿಸುತ್ತಾರೆ. ಆದರೆ, ಬಹುತೇಕ ಔಷಧಿ ಆಸ್ಪತ್ರೆಯಲ್ಲಿ ಲಭ್ಯ ಇರುವುದಿಲ್ಲ. ಆದ್ದರಿಂದ ಖಾಸಗಿ ಮಳಿಗೆಗಳಲ್ಲಿ ಖರೀದಿ ಮಾಡುವ ಪರಿಸ್ಥಿತಿ ಇದೆ.

ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯಗಳಲ್ಲಿ ನೀರಿನ ವ್ಯವಸ್ಥೆ ಕೂಡ ಇರುವುದಿಲ್ಲ. ಹೆರಿಗೆ, ಶಸ್ತ್ರಚಿಕಿತ್ಸೆ ರೋಗಿಗಳು ಕಡ್ಡಾಯವಾಗಿ ಖಾಸಗಿ ಮಳಿಗೆಗಳಿಂದ ಔಷಧಿ ಖರೀದಿಸಿ ಕೊಡಬೇಕು. ಔಷಧಿ ಇಲ್ಲದೇ ಹಲವು ಬಾರಿ ಗರ್ಭನಿರೋಧಕ ಶಸ್ತ್ರಚಿಕಿತ್ಸೆ ಶಿಬಿರಗಳು ರದ್ದಾಗಿರುವ ನಿದರ್ಶನಗಳಿವೆ. ಹಿಂದೆಂದೂ ಆಸ್ಪತ್ರೆ ಇಂತಹ ದುಸ್ಥಿತಿಗೆ ತಲುಪಿರಲಿಲ್ಲ. ಬಿಸಿಲಿನ ಬೇಗೆಯಲ್ಲಿ ಬಳಲುತ್ತಿರುವ ಪಾವಗಡದ ಬಡಜನರಿಗೆ ಆಸ್ಪತ್ರೆಯ ಆಡಳಿತವು ಶಾಪವಾಗಿ ಪರಿಣಮಿಸಿದೆ. ಹೀಗೆ ಹಲವು ತಿಂಗಳಿನಿಂದ ಅವ್ಯವಸ್ಥೆ ಇದ್ದರೂ, ಆಡಳಿತ ವೈದ್ಯಾಧಿಕಾರಿ ಡಾ.ಗಣೇಶ್ ಬಾಬು ಅವರನ್ನು ಸಾರ್ವಜನಿಕರು ಪ್ರಶ್ನಿಸಿದರೆ ಸರ್ಕಾರದಿಂದ ಔಷಧಿ ಸರಬರಾಜಾಗುತ್ತಿಲ್ಲವೆಂಬ ಹಾರಿಕೆ ಉತ್ತರ ನೀಡುತ್ತಾರೆ ಎಂದು ಕರ್ನಾಟಕ ಮಾದರ ಮಹಾಸಭಾ ತಾಲ್ಲೂಕು ಅಧ್ಯಕ್ಷ ಕತಿಕ್ಯಾತನಹಳ್ಳಿ ನರಸಿಂಹಪ್ಪ ಆರೋಪಿಸಿದರು. ಹಾಗಾದರೆ ಆಸ್ಪತ್ರೆಯಲ್ಲಿ ಸಂಗ್ರಹವಾಗುತ್ತಿರುವ ಹಣ ಮತ್ತು ಸರ್ಕಾರದಿಂದ ಬರುವಂತಹ ಅನುದಾನ ಏನಾಗುತ್ತಿದೆ ಎಂಬ ಅನುಮಾನ ಮೂಡುತ್ತಿದೆ. ತಾಲ್ಲೂಕು ಆಡಳಿತ ಮತ್ತು ಸ್ಥಳೀಯ ರಾಜಕಾರಣಿಗಳಿಗೆ ಇದರ ಬಗ್ಗೆ ಅರಿವಿದ್ದರೂ ಕ್ರಮ ವಹಿಸದೆ ಇರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗುತ್ತಿದೆ.

ವಕೀಲ ಟಿ.ಎನ್.ಪೇಟೆ ರಮೇಶ್ ಮಾತನಾಡಿ, ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಗಣೇಶ್ ಬಾಬು ಸಕಾಲಕ್ಕೆ ಸಾರ್ವಜನಿಕರಿಗೆ ಆಸ್ಪತ್ರೆಯಲ್ಲಿ ಲಭ್ಯವಿರುವುದಿಲ್ಲ. ಸಾರ್ವಜನಿಕರು ಅತೀ ತುರ್ತು ಸಂದರ್ಭದಲ್ಲಿ ಕರೆ ಮಾಡಿದರೂ ಸ್ವೀಕರಿಸುವುದಿಲ್ಲ.

ಇವರು ಈ ಹಿಂದೆ ಕುಣಿಗಲ್ ಸರ್ಕಾರಿ ಆಸ್ಪತ್ರೆಯಲ್ಲಿ ಆಡಳಿತ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದು, ಆ ಸಮಯದಲ್ಲಿ ಇವರ ಮೇಲೆ ಅನುದಾನ ದುರ್ಬಳಕೆ, ಆರ್ಥಿಕ ವ್ಯವಹಾರಗಳ ಮೇಲೆ ಲೋಕಾಯುಕ್ತ ತನಿಖೆಯಾಗಿದೆ. ಹಲವು ತನಿಖೆಗಳು ಇಲಾಖೆಯ ಹಂತದಲ್ಲಿ ವಿಚಾರಣೆ ನಡೆಯುತ್ತಿವೆ. ಇವರು ಹಣದ ಬಲ ಮತ್ತು ರಾಜಕೀಯ ಬಲದಿಂದ ಹಲವು ತನಿಖೆಗಳನ್ನು ಮುಚ್ಚಿಹಾಕಿರುತ್ತಾರೆ. ಇಂತಹ ಅನೇಕ ಅವ್ಯವಹಾರಗಳನ್ನು ಹೊಂದಿರುವ ವ್ಯಕ್ತಿಯನ್ನು ಪಾವಗಡ ಸರ್ಕಾರಿ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಯನ್ನಾಗಿ ನೇಮಿಸಿರುವುದು ದೊಡ್ಡ ದುರಂತ ಸಂಗತಿಯಾಗಿದೆ.

ಆದ್ದರಿಂದ ಇವರ ಮೇಲೆ ಇರುವ ಆರ್ಥಿಕ ಆರೋಪಗಳನ್ನು ತನಿಖೆ ನಡೆಸಿ ಕೂಡಲೇ ಆಡಳಿತ ವೈದ್ಯಾಧಿಕಾರಿಯ ಹುದ್ದೆಯಿಂದ ಕೈಬಿಟ್ಟು ತಾಲ್ಲೂಕಿನ ಬಡಜನರ ನೆರವಿಗೆ ಧಾವಿಸಬೇಕು ಇಲ್ಲದಿದ್ದಲ್ಲಿ ಈ ಬಗ್ಗೆ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಸರ್ಕಾರವನ್ನು ಎಚ್ಚರಿಸಿದರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ವೆಟರ್ನರಿ ಉಗ್ರಪ್ಪ, ಮೀನಕುಂಟನಹಳ್ಳಿ ನರಸಿಂಹಪ್ಪ, ಕನ್ನಮೇಡಿ ಕೃಷ್ಣಮೂರ್ತಿ, ವಳ್ಳೂರು ನಾಗೇಶ್, ನಲಿಗಾನಹಳ್ಳಿ ಮಂಜುನಾಥ್, ನಾಗರಾಜು, ಕಡಪಲಕೆರೆ ನರಸಿಂಹಪ್ಪ, ಶಿವಪ್ಪ, ಆಪ್ ಬಂಡೆ ಗೋಪಾಲ್, ಮುರಳಿ, ರಮೇಶ್ ನಾಯಕ, ಬೇಕರಿ ನಾಗರಾಜು, ಅಶೋಕ್, ಸುಬ್ಬಾರೆಡ್ಡಿ ಮತ್ತಿತರರು ಇದ್ದರು.

## ಆಲದ ಮರದ ಪಾರ್ಕ್‌ನಲ್ಲಿ ಎಂದೂ ಮರೆಯದ 'ಅಪ್ಪು ಆಲಾಪ'

### 'ಕೆಯುಡಬ್ಲುಜೆ, ಪ್ರೆಸ್‌ಕ್ಲಬ್, ಸ್ವರಾಮೃತ ತಂಡದಿಂದ ಐತಿಹಾಸಿಕ ಸಂಗೀತ ಸಂಜೆ

ತುಮಕೂರು : ಸಂಜೆಯ ತಂಪು ಗಾಳಿಯಲ್ಲಿ ಒಂದು ಮಧುರ ಸ್ಪರ್ಶದ ವೇದಿಕೆಯಲ್ಲಿ ಸ್ವರಗಳು, ಪ್ರೇಕ್ಷಕರ ಕಣ್ಣುಗಳಲ್ಲಿ ಮಿಂಚಿದ ನೆನಪುಗಳು. ಇಡೀ ತುಮಕೂರು ಒಟ್ಟಾಗಿ ಹಾಡುಗಳಿಗೆ ಧ್ವನಿಯಾಗಿ ಸಂಭ್ರಮಿಸಿದ ಕ್ಷಣವದು. ಇದಕ್ಕೆ ವೇದಿಕೆಯಾಗಿದ್ದು 'ಸ್ವರಾಮೃತ' ಎಂಬ ವಿನೂತನ ಸಂಗೀತ ಸಂಜೆ, 'ಅಪ್ಪು ಆಲಾಪ' ಎಂಬ 'ಸ್ವರಮೇಳ'. ಹೌದು, ನಗರದ ಪ್ರೆಸ್‌ಕ್ಲಬ್ ಆವರಣ ಆಲದಮರ ಪಾರ್ಕ್‌ನಲ್ಲಿ ಮಂಗಳವಾರ ಸಂಜೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಪ್ರೆಸ್‌ಕ್ಲಬ್ ಸಹಯೋಗದಲ್ಲಿ ಲಾಸ್ಟ್ ಅಂಡ್ ಫೌಂಡ್ ಹಾಗೂ ಸ್ವರಾಮೃತ ತಂಡ ಹಮ್ಮಿಕೊಂಡಿದ್ದ ಸ್ವರಾಮೃತ – ತುಮಕೂರು ಸಿಂಗ್ಸ್ ಟುಗೆದರ್ ಇಂತಹ ಒಂದು ಸುಮಧುರ ಅನುಭವಕ್ಕೆ ವೇದಿಕೆಯಾಯಿತು.





ಆಲದಮರ ಪಾರ್ಕ್‌ನ ತಂಪನೆಯ ಸೂರಿನಲ್ಲಿ ಸಂಜೆ 6 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಸುಮಾರು 700–800ಜನ ಜತೆಗೂಡಿ 'ಸ್ವರಾಮೃತ'ದಲ್ಲಿ ಹಾಡಿಗೆ ಧ್ವನಿಯಾಗಿದ್ದು ವಿಶೇಷವಾಗಿತ್ತು. ತುಮಕೂರು ಇತಿಹಾಸದಲ್ಲೇ ಮೊದಲಬಾರಿಗೆ ಈ ಕಾರ್ಯಕ್ರಮ ನಡೆದಿದ್ದು, ಪ್ರತಿ ತಿಂಗಳೂ ಇಂತಹ ಒಂದು ಸಂಜೆಯನ್ನು 'ನಮ್ಮ ತುಮಕೂರು' ಕಾಣಲಿದೆ. ಮೊದಲ ಸ್ವರಾಮೃತ ಕಾರ್ಯಕ್ರಮವನ್ನು ಕರ್ನಾಟಕ ರತ್ನ ಪುನೀತ್ ರಾಜಕುಮಾರ್ ಅವರಿಗೆ ಅರ್ಪಿಸಲಾಗಿತ್ತು. 'ಅಪ್ಪು ಆಲಾಪ' ಹೆಸರಲ್ಲಿ ನಡೆದ ಸ್ವರಾಮೃತದಲ್ಲಿ ಪುನೀತ್ ರಾಜಕುಮಾರ್ ಅವರ ಸಿನಿಮಾ ಹಾಡುಗಳಲ್ಲದೆ ಕನ್ನಡ ಸಿನಿಮಾದ ಹತ್ತಾರು ಹಾಡುಗಳು ಜೋಶ್ ಹೆಚ್ಚಿಸಿದ್ದವು.

*ಸಂಗೀತಯಾತ್ರೆ, ಭಾವನಾತ್ಮಕ ಬಂಧ*: ಅಪ್ಪು ಆಲಾಪ ಒಂದು ಭಾವನಾತ್ಮಕ ಸಂಗೀತ ಯಾತ್ರೆಯಾಗಿ ರೂಪಿತವಾಗಿತ್ತು. ವಿಶೇಷ ಸಂಗೀತ ಸಂಜೆ, ನೂರಾರು ಸಂಗೀತಾಭಿಮಾನಿಗಳನ್ನು ಒಂದೇ ಭಾವನೆಯಲ್ಲಿ ಕಟ್ಟಿಬಿಟ್ಟಿತು. ಬಿಳಿ ಉಡುಪಿನಲ್ಲಿ ಭಾಗವಹಿಸಿದ್ದ ತುಮಕೂರಿಗರು ಸ್ಥಳಕ್ಕೆ ಒಂದು ಸ್ವರ ಪವಿತ್ರತೆ ಹಾಗೂ ಗೌರವದ ಮೆರಗು ತಂದರು.

ಜನಪ್ರಿಯ ಹಾಡುಗಳ ಸ್ವರಗಳು ಇಡೀ ಆಲದ ಮರದ ಪಾರ್ಕ್‌ನಲ್ಲಿ ತುಂಬಿಕೊಂಡವು. ಪ್ರತಿಯೊಂದು ಹಾಡು, ಕೇವಲ ಸಂಗೀತವಲ್ಲ – ಅದು ಒಂದು ನೆನಪು, ಒಂದು ಅನುಭವ.

ಬೊಂಬೆ ಹೇಳುತೈತೆ ಸೇರಿದಂತೆ ಅಪ್ಪು ಹಾಡುಗಳು ಕೇಳಿಬಂದಾಗ, ಹಲವರ ಕಣ್ಣುಗಳಲ್ಲಿ ಕಣ್ಣೀರು ತುಂಬಿದ ದೃಶ್ಯವೂ ಕಂಡುಬಂತು. ಯುವ ಗಾಯಕರು ಹಾಗೂ ಸ್ಥಳೀಯ ಕಲಾವಿದರು ತಮ್ಮ ಮನಸಿನಾಳದಿಂದ ಹಾಡಿದ ಹಾಡುಗಳು, ಪ್ರೇಕ್ಷಕರ ಮನಸ್ಸಿಗೆ ನೇರವಾಗಿ ತಲುಪಿದವು.

ಪ್ರತಿ ರಾಗವೂ ಅಪ್ಪು ಸರಳತೆ, ಮಾನವೀಯತೆ ಮತ್ತು ಕಲಾತ್ಮಕತೆಯನ್ನು ಮತ್ತೆ ನೆನಪಿಗೆ ತಂದಿತು. ಈ ಕಾರ್ಯಕ್ರಮದ ವಿಶೇಷ ಅಂಶವೆಂದರೆ – ಇದು ಕೇವಲ ಒಂದು ಸಂಗೀತ ಕಾರ್ಯಕ್ರಮವಾಗಿರಲಿಲ್ಲ; ಅದು ಒಂದು ಸಮೂಹ ಸ್ಮರಣೆ.

ಪ್ರತಿ ಪ್ರೇಕ್ಷಕನಿಗೂ ತಮ್ಮದೇ ಆದ ಅಪ್ಪು ನೆನಪು ಇತ್ತು. ಕೆಲವರು ಅವರ ಸಿನಿಮಾಗಳ ಬಗ್ಗೆ ಮಾತನಾಡಿದರೆ, ಇನ್ನೂ ಕೆಲವರು ಅವರ ವ್ಯಕ್ತಿತ್ವವನ್ನು ಸ್ಮರಿಸಿದರು.

ಶಾಸಕ ಜಿ.ಬಿ.ಜ್ಯೋತಿಗಣೇಶ್, ಜಿಲ್ಲಾಧಿಕಾರಿ ಶುಭಾಕಲ್ಯಾಣ್, ಮಹಾನಗರ ಪಾಲಿಕೆ ಆಯುಕ್ತೆ ಶುಭಾ ಬಿ. , ಸ್ವರಾಮೃತ ತಂಡದ ಹನುಮಂತರಾಜು, ಪ್ರೀತಮ್, ರೇಖಾ, ಕಿರಣ್, ದರ್ಶನ್, ಕೆಯುಡಬ್ಲುಜೆ ಜಿಲ್ಲಾಧ್ಯಕ್ಷ ಎಲ್.ಯೋಗೇಶ್, ಪ್ರೆಸ್ ಕ್ಲಬ್ ಅಧ್ಯಕ್ಷ ಶಶಿಧರ್ ಎಸ್. ದೋಣಿಹಕ್ಲು ಮತ್ತಿತರರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

# ಜನರ ಅನಿವಾರ್ಯತೆ ಬಳಸಿಕೊಂಡು ಹಣ ಮಾಡಲು ಮುಂದಾದ ಗ್ಯಾಸ್ ವಿತರಕ ಸಿಬ್ಬಂದಿಗಳು

ಬುಕ್ಕಾಪಟ್ಟಣದಲ್ಲಿ ಗ್ಯಾಸ್ ಏಜೆನ್ಸಿ ಯವರ ಹಗಲುದರೊಡೆ. ಜನರ ಅನಿವಾರ್ಯತೆ ಬಳಸಿಕೊಂಡು ಹಣ ಮಾಡಲು ಮುಂದಾದ ಗ್ಯಾಸ್ ವಿತರಕ ಸಿಬ್ಬಂದಿಗಳು.

ಇರಾನ್ ಸಂಘರ್ಷ ಹೆಚ್ಚಾಗುತ್ತಿದ್ದಂತೆ, ದೇಶದಲ್ಲಿ ಒಂದೆಡೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರ ಬದುಕು ದುಸ್ತರವಾಗುತ್ತಿದ್ದರೆ, ಮತ್ತೊಂದೆಡೆ ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಗ್ಯಾಸ್ ಏಜೆನ್ಸಿಗಳು ಸಾರ್ವಜನಿಕರನ್ನು ಸುಲಿಗೆ ಮಾಡುತ್ತಿರುವ ಆತಂಕಕಾರಿ ವಿಷಯ ಬೆಳಕಿಗೆ ಬಂದಿದೆ. ಶಿರಾ ತಾಲೂಕು ಬುಕ್ಕಾಪಟ್ಟಣದ ಸ್ಥಳೀಯ ಗ್ಯಾಸ್ ಏಜೆನ್ಸಿ ಯೊಂದು ಪ್ರತಿ ಸಿಲೆಂಡರ್ ನಿಗದಿತ ದರಕ್ಕಿಂತ 71 ಗಳಷ್ಟು ಹೆಚ್ಚಿನ ಹಣ ವಸೂಲಿ ಮಾಡುತ್ತಿದ್ದು ಗ್ರಾಮಸ್ಥರು ಏಜೆನ್ಸಿ ವಿರುದ್ಧ ಇಡೀ ಶಾಪ ಹಾಕುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಈ ಕುರಿತ ವಿಡಿಯೋ ವೈರಲ್ ಆಗಿದ್ದು ಗ್ಯಾಸ್ ಏಜೆನ್ಸಿಗಳ ಈ ಕೆಲಸಕ್ಕೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸರ್ಕಾರದ ದರಕ್ಕೆ ಕವಡೆ ಕಾಸಿನ ಕಿಮ್ಮತ್ತಿಲ್ಲ– ಸರ್ಕಾರವು ಅಡಿಗೆ ಅನಿಲದರವನ್ನು ನಿಯಮಿತವಾಗಿ ಪರಿಷ್ಕರಿಸುತ್ತದೆ ಮತ್ತು ಗ್ರಾಹಕರಿಗೆ ನಿಗದಿದ ದರದಲ್ಲಿ ಸಿಲಿಂಡರ್ ವಿತರಿಸಬೇಕೆಂಬ ಕಟ್ಟುನಿಟ್ಟಿನ ನಿಯಮವಿದೆ ಆದರೆ ಬುಕ್ಕಾಪಟ್ಟಣ ಹೋಬಳಿಯಲ್ಲಿ ಪರಿಸ್ಥಿತಿಯೇ ಭಿನ್ನವಾಗಿದೆ. ಇಲ್ಲಿನ ಸ್ಥಳೀಯ ಎಚ್ ಪಿ ಗ್ಯಾಸ್ ಗ್ರಾಮೀಣ ವಿತರಕ ಏಜೆನ್ಸಿ ಹಾಗೂ ಶಿರಾದ ಕೆಲವು ಏಜೆನ್ಸಿ ವಿತರಕರು ಪ್ರತಿಯೊಬ್ಬ ಗ್ರಾಹಕರಿಗಿಂತಲೂ ಕಡ್ಡಾಯವಾಗಿ 71 ಹೆಚ್ಚುವರಿ ಹಣ ನೀಡುವಂತೆ ಪಟ್ಟು ಹಿಡಿಯುತ್ತಿದ್ದಾರೆ ಈ ಹೆಚ್ಚುವರಿ ಹಣ ಯಾವುದಕ್ಕಾಗಿ ಎಂಬ ಪ್ರಶ್ನೆಗೆ ಸಿಬ್ಬಂದಿಗಳಿಂದ ಸಮರ್ಪಕ ಉತ್ತರ ಸಿಗುತ್ತಿಲ್ಲ ಸರ್ಕಾರದ ನಿಯಮದಂತೆ ಏಜೆನ್ಸಿಗಳು 5 ಇಟ ವ್ಯಾಪ್ತಿಯ ಸುತ್ತಳತೆಯಲ್ಲಿ ಉಚಿತವಾಗಿ ಮನೆ ಮನೆಗೆ ಸಿಲಿಂಡರ್ ಪೂರೈಕೆ ಮಾಡಬೇಕು ಆದರೆ ಗ್ಯಾಸ್ ಏಜೆನ್ಸಿಗೆ ಅವರ ಗೋಡೌನ್ ಬಳಿ ಸಿಲಿಂಡರ್ ಗಳನ್ನು ವಿತರಣೆ ಮಾಡದೆ ಗ್ರಾಮದ ಒಳಗೂ ಸಹ ತೆಗೆದುಕೊಂಡು ಹೋಗದೆ ರಸ್ತೆಯಲ್ಲಿ ನಿಲ್ಲಿಸಿ ಸಾರ್ವಜನಿಕರಿಂದ ಹೆಚ್ಚುವರಿ ಹಣಕ್ಕೆ ಬೇಡಿಕೆ ಇಡುತ್ತಿದ್ದಾರೆ.



ಬುಕ್ಕಾಪಟ್ಟಣದ ಗ್ರಾಮದಲ್ಲಿ ಕೆಲವು ವಿತರಕರು ತಮ್ಮ ಬಳಿ ಸಿಲಿಂಡರ್ ಗಳನ್ನು ಇರಿಸಿಕೊಂಡು ಸಿಲಿಂಡರ್ ಬೇಕಾದವರು ತಮ್ಮ ಬಳಿಗೆ ಬಂದು ತೆಗೆದುಕೊಂಡು ಹೋಗಬೇಕು ನಾವು ಮನೆಮನೆಗೆ ಗ್ಯಾಸ್ ಸಿಲಿಂಡರ್ ನೀಡಲಾಗುವುದಿಲ್ಲ ಎಂದು ಧಮಕಿ ಹಾಕುತ್ತಿದ್ದು ನಿಗದಿತ ದರಕ್ಕಿಂದ ಹೆಚ್ಚಿನ ಹಣ ಪಡೆಯುತ್ತಿದ್ದಾರೆ ಎಂಬ ಗಂಭೀರ ಆರೋಪಗಳನ್ನು ಸಾರ್ವಜನಿಕರು ಮಾಡುತ್ತಿದ್ದಾರೆ. ವಾರಗಟ್ಟಲೆ ಕಾದರೂ ಸಿಗದ ಸಿಲಿಂಡರ್ ವಿತರಣಾ ವ್ಯವಸ್ಥೆ: ಕೇವಲ ಹಣದ ಲೂಟಿ ಮಾತ್ರಬಲ್ಲದೆ ಗ್ಯಾಸ್ ವಿತರಣಾ ವ್ಯವಸ್ಥೆಯು ಸಹ ಸಂಪೂರ್ಣ ಹದಗೆಟ್ಟಿದೆ ಗ್ರಾಹಕರು ಸಿಲಿಂಡರ್ ಬುಕ್ ಮಾಡಿ ವಾರಗಟ್ಟಲೆ ಕಾಯುವುದು ಅನಿವಾರ್ಯವಾಗಿದೆ. ಸಿಲಿಂಡರ್ ಗಾಗಿ ಸಾರ್ವಜನಿಕರ ಪರದಾಟ: ಜನರು ತಮ್ಮ ದಿನನಿತ್ಯದ ಕೆಲಸ ಕಾರ್ಯಗಳನ್ನು ಬಿಟ್ಟು ಕೂಲಿ ಲಾಲಿ ಕೆಲಸಕ್ಕೆ ರಜ ಹಾಕಿ ಗ್ಯಾಸ್ ವಾಹನಕ್ಕಾಗಿ ರಸ್ತೆಯಲ್ಲಿ ಕಾದು ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ ಆನ್ಲೈನ್ ಅಥವಾ ಫೋನ್ ಮೂಲಕ ಬುಕಿಂಗ್ ಮಾಡಿದರು ಸಹ ಸಕಾಲಕ್ಕೆ ಸಿಲಿಂಡರ್ ತಲುಪುತ್ತಿಲ್ಲ ಏಜೆನ್ಸಿಯವರ ಈ ಬೇಜವಾಬ್ದಾರಿತನಕ್ಕೆ ಅನೇಕ ಕುಟುಂಬಗಳು ಅನಿವಾರ್ಯವಾಗಿ ಸೌದೆ ಒಲೆ ಅವಲಂಬಿಸುವಂತಾಗಿದೆ. ದಿನ ಬಳಕೆಯ ವಸ್ತುಗಳ ಬೆಲೆ ಗಗನಕ್ಕೇರಿದೆ ಇಂತಹ ಸಮಯದಲ್ಲಿ ಕಷ್ಟಪಟ್ಟ ಸಂಪಾದಿಸಿದ ಹಣದಲ್ಲಿ ಗ್ಯಾಸ್ ಖರೀದಿಸುವುದೇ ಕಷ್ಟವಾಗಿದೆ ಹೀಗಿರುವಾಗ ಏಜೆನ್ಸಿ ಅವರು ದರ್ಪದಿಂದ ಹೆಚ್ಚುವರಿ ಹಣ ಕೇಳುತ್ತಿದ್ದಾರೆ ಕೇಳಿದಷ್ಟು ಹಣ ಕೊಡದಿದ್ದರೆ ಸಿಲಿಂಡರ್ ಇಲ್ಲ ಎನ್ನುತ್ತಾರೆ ಇದು ಹಗಲು ಲೂಟಿ ಅಲ್ಲದೆ ಮತ್ತೇನು ಎಂದು ಗ್ರಾಮಸ್ಥರು ಹಾಗೂ ಮಹಿಳೆಯರು ಬೇಸರ ವ್ಯಕ್ತಪಡಿಸಿದ್ದಾರೆ.

ಅಧಿಕಾರಿಗಳ ಮೌನಕ್ಕೆ ಸಾರ್ವಜನಿಕರ ಬೇಸರ: ಇಷ್ಟೆಲ್ಲ ಅಕ್ರಮಗಳು ಬಹಿರಂಗವಾಗಿ ನಡೆಯುತ್ತಿದ್ದರು ಸಹ ಆಹಾರ ಇಲಾಖೆಯ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ತಹಶೀಲ್ದಾರ್ ಕಚೇರಿ ಅವರು ಮೌನಕ್ಕೆ ಶರಣಾಗಿರುವುದು ಸಾರ್ವಜನಿಕರ ಅನುಮಾನಕ್ಕೆ ಕಾರಣವಾಗಿದೆಯೇ ಎಂಬ ಮಾತುಗಳು ಗ್ರಾಮಸ್ಥರಲ್ಲಿ ಕೇಳಿಬರುತ್ತಿವೆ. ಇನ್ನಾದರೂ ಅಧಿಕಾರಿಗಳು ಹೆಚ್ಚೆತ್ತುಕೊಂಡು ಅಕ್ರಮವಾಗಿ 71 ರೂಪಾಯಿ ಹಣ ಹೆಚ್ಚುವರಿ ಪಡೆಯುತ್ತಿರುವುದನ್ನು ರದ್ದುಪಡಿಸಬೇಕು ಹಾಗೂ ತಪ್ಪಿತಸ್ಥ ಏಜೆನ್ಸಿ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಮನೆಮನೆಗಳಿಗೆ ಗ್ಯಾಸ್ ವಿತರಣ ವ್ಯವಸ್ಥೆ ಕೈಗೊಳ್ಳಬೇಕು ಇಲ್ಲವಾದಲ್ಲಿ ತಾಲೂಕು ಕಚೇರಿಯ ಎದುರು ಧರಣಿ ಮಾಡುವುದಾಗಿ ಸಾರ್ವಜನಿಕರು ಎಚ್ಚರಿಕೆ ನೀಡಿದ್ದಾರೆ.

ನಮ್ಮ ಏಜೆನ್ಸಿಯಿಂದ ಮನೆ ಮನೆಗೆ ಗ್ಯಾಸ್ ಸಿಲಿಂಡರ್ಗಳ ಪೂರೈಕೆ ಮಾಡಲು ಆಗುವುದಿಲ್ಲ ಸದ್ಯಕ್ಕೆ ನಾವು ಎಲ್ಲಿ ಗಾಡಿ ನಿಲ್ಲಿಸುತ್ತೇವೆಯೋ ಅಲ್ಲಿಗೆ ಬಂದು ಸಿಲಿಂಡರ್ ಗಳನ್ನು ತೆಗೆದುಕೊಂಡು ಹೋಗಬೇಕು ಹಾಗೂ ಸಿಲಿಂಡರ್ ವಿತರಕರಿಗೆ ಹೆಚ್ಚುವರಿ ಹಣ ನೀಡಿಯೇ ತೆಗೆದುಕೊಂಡು ಹೋಗಬೇಕು

ರಘುರಾಂಶ್ರೀ ನಂಜುಂಡೇಶ್ವರ ಗ್ರಾಮೀಣ ಗ್ಯಾಸ್ ವಿತರಕರು.

ಬುಕ್ಕಾಪಟ್ಟಣದಲ್ಲಿ ಇರುವ ಎಚ್ ಪಿ ಗ್ಯಾಸ್ ಏಜೆನ್ಸಿ ಯವರು ಗೋಡನ್ನ ಬಳಿ ಸಹ ಸಿಲಿಂಡರ್ ನೀಡುವುದಿಲ್ಲ ಮನೆಮನೆಗೂ ಪೂರೈಕೆ ಮಾಡುವುದಿಲ್ಲ ಅವರು ಎಲ್ಲಿ ಗಾಡಿ ನಿಲ್ಲಿಸುತ್ತಾರೋ ಅಲ್ಲಿಗೆ ಹೋಗಿ ಹೆಚ್ಚುವರಿ ಹಣ ನೀಡಿ ಸಿಲಿಂಡರ್ ತೆಗೆದುಕೊಳ್ಳಬೇಕಾದ ಅನಿವಾರ್ಯತೆ ಇದೆ ಏಜೆನ್ಸಿಯಿಂದ ಐದು ಕಿಲೋಮೀಟರ್ ವ್ಯಾಪ್ತಿಯಲ್ಲಿ ಉಚಿತ ಸಿಲಿಂಡರ್ ಪೂರೈಕೆ ಮಾಡಬೇಕೆಂಬ ನಿಯಮವನ್ನು ಗಾಳಿಗೆ ತೂರಿದ್ದು ಅಧಿಕಾರಿಗಳು ಗಮನಹರಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕಾಗಿ ಮನವಿ.

ಶ್ರೀಧರ್ ಗ್ರಾಮಸ್ಥರು ಬುಕ್ಕಾಪಟ್ಟಣ

ಬುಕ್ಕಾಪಟ್ಟಣದ ಶ್ರೀ ನಂಜುಂಡೇಶ್ವರ ಗ್ರಾಮೀಣ ಗ್ಯಾಸ್ ವಿತರಕ ಕಂಪನಿಯಿಂದ ಗ್ಯಾಸ್ ಸಿಲಿಂಡರ್ ಗಳಿಗೆ ಹೆಚ್ಚುವರಿ ಹಣದ ಬೇಡಿಕೆ ಇಡುತ್ತಿರುವ ಬಗ್ಗೆ ಹಾಗೂ ಮನೆಮನೆಗಳಿಗೆ ಗ್ಯಾಸ್ ಪೂರೈಕೆ ಮಾಡದಿರುವ ಬಗ್ಗೆ ಹಲವು ದೂರುಗಳು ಬಂದಿದ್ದು ಈ ಬಗ್ಗೆ ಪರಿಶೀಲನೆ ನಡೆಸಿ ಉನ್ನತ ಅಧಿಕಾರಿಗಳಿಗೆ ವರದಿ ಸಲ್ಲಿಸಿ ಕ್ರಮ ಕೈಗೊಳ್ಳಲಾಗುವುದು

ಸಚಿನ್ ಪ್ರಸಾದ್ ಎಸ್ ಆರ್
ಆಹಾರ ನಿರೀಕ್ಷಕ ಅಧಿಕಾರಿಗಳು ಶಿರಾ ತಾಲೂಕು

# ಅಂಬೇಡ್ಕರ್ ವಿಶ್ವದಲ್ಲಿಯೇ ಜ್ಞಾನದ ಸಂಕೇತವಾಗಿದ್ದರು

ತುಮಕೂರು: ಜಾತಿ ಪದ್ದತಿ ಮತ್ತು ಅಸ್ಪೃಶ್ಯತೆಯ ವಿರುದ್ಧ ಹೋರಾಡಿ, ಪ್ರತಿಯೊಬ್ಬರಿಗೂ ಸಮಾನ ಹಕ್ಕುಗಳನ್ನು ಒದಗಿಸಿಕೊಟ್ಟ ಮಹಾನ್ ನಾಯಕ ಡಾ. ಬಿ.ಆರ್. ಅಂಬೇಡ್ಕರ್ ವಿಶ್ವದಲ್ಲಿಯೇ ಜ್ಞಾನದ ಸಂಕೇತವಾಗಿದ್ದಾರೆ ಎಂದು ಹಿರಿಯ ಕಲಾವಿದ ಹಾಗೂ ಛಲವಾದಿ ಮಹಾಸಭೆ ನಿರ್ದೇಶಕರಾದ ಜಿ.ವಿ.ತಿಮ್ಮಯ್ಯ ಅಭಿಪ್ರಾಯಪಟ್ಟರು.

ಕೇಂದ್ರ ಯುವ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯ, ಮೈ-ಭಾರತ್ ಮೇರಾ ಯುವ ಭಾರತ್ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಯುವಕ ಸಂಘದ ಸಂಯುಯಕ್ತಾಶ್ರಯದಲ್ಲಿ ಕೊರಟಗೆರೆ ತಾಲ್ಲೂಕು ಗರುಗದೊಡ್ಡಿ ಡಾ.ಬಿ.ಆರ್. ಅಂಬೇಡ್ಕರ್ ಯುವಕ ಸಂಘದ ಆವರಣದಲ್ಲಿ ಹಮ್ಮಿಕೊಂಡಿದ್ದ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ಸಂವಿಧಾನ ಶಿಲ್ಪಿಯಷ್ಟೇ ಅಲ್ಲದೆ, ಪ್ರಖ್ಯಾತ ಅರ್ಥಶಾಸ್ತ್ರಜ್ಞ, ನ್ಯಾಯಶಾಸ್ತ್ರಜ್ಞ ಮತ್ತು ಸಮಾಜ ಸುಧಾರಕರಾಗಿದ್ದರು ಎನ್ನುವುದನ್ನು ಅರಿಯಬೇಕಿದೆ ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಬೆಸ್ಕಾಂ ಅಧಿಕಾರಿ ಜಿ.ಎಲ್.ಶ್ರೀನಿವಾಸ್ ಮಾತನಾಡಿ, ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ತುಳಿತಕ್ಕೊಳಗಾದ ಸಮುದಾಯಗಳನ್ನು ಮೇಲಕ್ಕೆತ್ತಿದ ಮಹಾನ್ ವ್ಯಕ್ತಿ ಎಂದು ಹೇಳಿದರು.

ಸಂವಿಧಾನದ ಮೂಲಕ ಎಲ್ಲ ಜೀವಿಗಳಿಗೆ ಬದುಕುವ ಹಕ್ಕು ಇದೆ ಎಂದು ಸಾರಿದ್ದಾರೆ. ಪ್ರಾಣಿಗಳ ಮೇಲೂ ದಯ ತೋರಬೇಕು ಎಂಬ ಸಂದೇಶವನ್ನು ನೀಡಿದ್ದಾರೆ. ಅವರನ್ನು ಒಂದು ಸಮುದಾಯಕ್ಕೆ ಸೀಮಿತಗೊಳಿಸುವುದು ಸರಿಯಲ್ಲ ಎಂದು ತಿಳಿಸಿದರು.

ಬಾಬಾ ಸಾಹೇಬರು ತಮ್ಮ ಜೀವನದ ಉದ್ದಕ್ಕೂ ನೋವನ್ನು ಅನುಭವಿಸಿ ದೇಶ ವಿದೇಶಗಳಲ್ಲಿ ವ್ಯಾಸಂಗ ಮಾಡಿ ಉನ್ನತ ಶಿಕ್ಷಣ ಪಡೆದು. ಭಾರತ ದೇಶದಲ್ಲಿ ನಡೆಯುತ್ತಿದ್ದ ಅಸ್ಪೃಶ್ಯತೆ ಅಸಮಾನತೆ. ಲಿಂಗ ತಾರತಮ್ಯ ಇವುಗಳ ಬಗ್ಗೆ ಚಿಂತಿಸಿ ಜಗತ್ತಿನ




ಎಲ್ಲಾ ಸಂವಿಧಾನಕ್ಕಿಂತಲೂ ಸರ್ವ ಶ್ರೇಷ್ಠ ಸಂವಿಧಾನವನ್ನು ನಮ್ಮ ದೇಶಕ್ಕೆ ನೀಡಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ನಿವೃತ್ತ ಕೃಷಿ ಅಧಿಕಾರಿ ಜಿ.ವಿ.ಹನುಮಂತರಾಯಪ್ಪ ಮಾತನಾಡಿ, ಡಾ. ಬಿ. ಆರ್. ಅಂಬೇಡ್ಕರ್ ಅವರು ಸಂವಿಧಾನ ರಚನೆ ಮೂಲಕ ದೇಶದ ಸಮಾನತೆ ಮತ್ತು ನ್ಯಾಯ ವ್ಯವಸ್ಥೆಗೆ ಬಲವಾದ ಅಡಿಪಾಯ ಹಾಕಿಕೊಟ್ಟವರು ಹಾಗೂ ಅವರು ಎದುರಿಸಿದ ಕಷ್ಟಗಳು ಅಪಾರವಾಗಿದ್ದು, ಸಮಾಜದ ಅನ್ಯಾಯ ಮತ್ತು ಅಸಮಾನತೆ ನಡುವೆಯೇ ಅವರು ಉನ್ನತ ಶಿಕ್ಷಣ ಪಡೆದು, ಹಲವು ದೇಶಗಳ ಸಂವಿಧಾನಗಳನ್ನು ಅಧ್ಯಯನ ಮಾಡಿ ಭಾರತದ ಸಂವಿಧಾನವನ್ನು ರಚಿಸಿದ್ದಾರೆ ಎಂದು ಹೇಳಿದರು.

ಡಾ.ಬಿ.ಆರ್.ಅಂಬೇಡ್ಕರ್ ಯುವಕ ಸಂಘ ಗರುಗದೊಡ್ಡಿ ಗೌರವಾಧ್ಯಕ್ಷ ಜಿ.ವಿ.ವೀರೇಂದ್ರ ಪ್ರಸಾದ್ ಮಾತನಾಡಿ, ಹೆಣ್ಣುಮಕ್ಕಳ ಹಕ್ಕುಗಳ ವಿಷಯದಲ್ಲಿ ಅಂಬೇಡ್ಕರ್ ಅವರ ಕೊಡುಗೆ ಅತ್ಯಂತ ಮಹತ್ವದ್ದಾಗಿದೆ. ಮಹಿಳೆಯರಿಗೆ ಆಸ್ತಿ ಹಕ್ಕು, ಮರು ವಿವಾಹ ಹಕ್ಕು ಹಾಗೂ ಸಮಾನ ಅವಕಾಶಗಳನ್ನು ನೀಡುವಲ್ಲಿ ಅವರ ಪಾತ್ರವನ್ನು ಸ್ಮರಿಸಬೇಕಾಗಿದೆ ಎಂದು ತಿಳಿಸಿದರು.

ಇಂದಿನ ಯುವಕರು ಅಂಬೇಡ್ಕರ್ ಅವರ ವಿಚಾರಗಳನ್ನು ಸರಿಯಾಗಿ ಅರಿತುಕೊಂಡು, ಸಂವಿಧಾನದ ಮೌಲ್ಯಗಳನ್ನು ಸಮಾಜದಲ್ಲಿ ಪ್ರಚಾರ ಮಾಡುವ ಜವಾಬ್ದಾರಿ ಹೊತ್ತುಕೊಳ್ಳಬೇಕು. ಸಮಾನತೆ, ನ್ಯಾಯ ಮತ್ತು ಸಹಬಾಳ್ವೆಯ ಆಶಯಗಳನ್ನು ಅಳವಡಿಸಿಕೊಂಡಾಗ ಮಾತ್ರ ದೇಶದಲ್ಲಿ ಸಾಮರಸ್ಯ, ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ಅಂಬೇಡ್ಕರ್ ಯುವಕ ಸಂಘದ ಯುವಕರು ಗ್ರಾಮದಲ್ಲಿ ಪಾದಯಾತ್ರೆ ನಡೆಸುವ ಮೂಲಕ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಿದರು. ಡಾ.ಬಿ.ಆರ್.ಅಂಬೇಡ್ಕರ್ ಅವರ ಬಗ್ಗೆ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಕಾರ್ಯಕ್ರಮದಲ್ಲಿ ಜಿ.ಟಿ.ವೆಂಕಟೇಶ್, ವಿನಯ್ ಕುಮಾರ್, ಜಿ.ಎನ್.ರಾಜಣ್ಣ ಭಾಗವಹಿಸಿದ್ದರು. ಗರುಗದೊಡ್ಡಿ ಬಾಬು ಸ್ವಾಗತಿಸಿ, ವಂದಿಸಿದರು.

# ಯುವಕರಿಂದ ಅದ್ದೂರಿ ಅಂಬೇಡ್ಕರ್ ಜಯಂತಿ ಆಚರಣೆ



ಮಧುಗಿರಿ: ತಾಲೂಕಿನ ಕೋಡ್ಲಾಪುರ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಮಾತಂಗಿ ಕಲಾ ಮತ್ತು ಸಾಂಸ್ಕೃತಿಕ ಬಳಗದ ಯುವಕರು ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಆಚರಿಸಿದರು.

ಗ್ರಾಮದ ಪ್ರಮುಖ ಸ್ಥಳದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರದ ಫಲಕವನ್ನು ಅಳವಡಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಯುವ ಸಮೂಹವು ಅಂಬೇಡ್ಕರ್ ಅವರ ತತ್ವ ಆದರ್ಶಗಳನ್ನು ಸ್ಮರಿಸುತ್ತಾ, ನೀಲಿ ಬಾವುಟಗಳನ್ನು ಹಿಡಿದು ಜೈಕಾರ ಹಾಕುತ್ತ ತಮಟೆ ವಾದ್ಯಗಳನ್ನು ಬಾರಿಸುವ ಮೂಲಕ ಇಡೀ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಿಸಿದ್ದರು.

ಮಾತಂಗಿ ಸಂಘದ ಅಧ್ಯಕ್ಷ ವಿಜಯ್ ಕುಮಾರ್ ಕೆ.ಎಸ್.ಮಾತನಾಡಿ ಅಂಬೇಡ್ಕರ್ ಅವರು ನೀಡಿದ ಸಂವಿಧಾನದ ಅಡಿಯಲ್ಲಿ ನಾವೆಲ್ಲರೂ ಸಮಾನತೆಯಿಂದ ಬಾಳುತ್ತಿದ್ದೇವೆ. ಅವರ ಆಶಯದಂತೆ ಶಿಕ್ಷಣ ಮತ್ತು ಸಂಘಟನೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಕರೆ ನೀಡಿದ ಅವರು ಬಾಬಾಸಾಹೇಬ್ ಅಂಬೇಡ್ಕರ್ ಅವರ ಜೀವನ ಸಂದೇಶವನ್ನು ಯುವಜನತೆಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷ ನಾರಾಯಣಪ್ಪ, ನಿರ್ದೇಶಕರಾದ ಪಾರ್ವತಮ್ಮ,ವೆಂಕಟ್,ನಾರಾಯಣ್, ತಾ.ಪಂ. ಮಾಜಿ ಸದಸ್ಯ ಶ್ರೀನಿವಾಸ್,ಗಣೇಶಪ್ಪ,ಶಾಂತವೇಣಿ ಎಂ.ಎನ್,

ಮಾತಂಗಿ ಕಲಾ ಮತ್ತು ಸಾಂಸ್ಕೃತಿಕ ಬಳಗದ ಮುಖ್ಯಸ್ಥರು ಹಾಗೂ ಗ್ರಾಮದ ಯುವಕರು ಹಾಗೂ ಸಾರ್ವಜನಿಕರು ಭಾಗವಹಿಸಿ ಅಂಬೇಡ್ಕರ್ ಅವರಿಗೆ ಪುಷ್ಪ ನಮನ ಸಲ್ಲಿಸಿದರು.

# ಮಾನಸ ಗಂಗೋತ್ರಿ ಆಂಗ್ಲ ಮತ್ತು ಕನ್ನಡ ಮಾಧ್ಯಮ ಶಾಲೆ ಪ್ರವೇಶ : ಏ.25ರಂದು ಪರೀಕ್ಷೆ

ತುಮಕೂರು: ಮಾನಸ ಗಂಗೋತ್ರಿ ಆಂಗ್ಲ ಮತ್ತು ಕನ್ನಡ ಮಾಧ್ಯಮ ಶಾಲೆಗೆ 5ನೇ ತರಗತಿಗೆ ಸೇರ ಬಯಸುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ತುಮಕೂರು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬೇಕೆಂದು ಜಂಟಿ ನಿರ್ದೇಶಕಿ ಸೋನಿಯಾ ವರ್ಣೇಕರ್ ತಿಳಿಸಿದ್ದಾರೆ.

ಮಾನಸ ಗಂಗೋತ್ರಿ ಆಂಗ್ಲ ಮತ್ತು ಕನ್ನಡ ಮಾಧ್ಯಮ ಶಾಲೆಗೆ ಪ್ರತಿಷ್ಠಿತ ಶಾಲೆ ಯೋಜನೆಯಡಿ 2026–27ನೇ ಸಾಲಿಗೆ ವಿದ್ಯಾರ್ಥಿಗಳನ್ನು 5ನೇ ತರಗತಿಗೆ ಆಯ್ಕೆ ಮಾಡಿ ಕಳುಹಿಸುವಂತೆ ವಿಜಯಪುರ ಜಿಲ್ಲೆ ತಿಡಗುಂದಿಯ ಕಾಯಕಯೋಗಿ ಗ್ರಾಮೀಣ ಶಿಕ್ಷಣ ಸೇವಾ ದತ್ತಿ ವಿಶ್ವಸಂಸ್ಥೆಯ ಸಂಸ್ಥಾಪನಾ ಅಧ್ಯಕ್ಷರು ಸೂಚಿಸಿರುತ್ತಾರೆ.

ಆಸಕ್ತ ವಿದ್ಯಾರ್ಥಿಗಳು ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಹಿಂದಿನ ತರಗತಿಯ ಫಲಿತಾಂಶ ಪ್ರಮಾಣಪತ್ರ, ಬ್ಯಾಂಕ್ ಪಾಸ್ ಪುಸ್ತಕದೊಂದಿಗೆ ಏಪ್ರಿಲ್ 21ರೊಳಗಾಗಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಿ ಇಲಾಖೆಯ ಶಿಫಾರಸ್ಸು ಪತ್ರದೊಂದಿಗೆ ಪರೀಕ್ಷೆಗೆ ಹಾಜರಾಗಬಹುದು. 5ನೇ ತರಗತಿ ಪರೀಕ್ಷೆಯು ಏಪ್ರಿಲ್ 25ರಂದು ನಡೆಯಲಿದೆ ಎಂದು ಅವರು ತಿಳಿಸಿದ್ದಾರೆ.

# ಬ್ಯೂಟಿಷಿಯನ್ ಹಾಗೂ ಫ್ಯಾಶನ್ ಡಿಸೈನಿಂಗ್ ಕೋರ್ಸ್ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ಬೆಂಗಳೂರಿನ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಧಾರವಾಡ ಜಿಲ್ಲೆ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಹಾಗೂ ತುಮಕೂರು ಜಿಲ್ಲಾ ಕೈಗಾರಿಕಾ ಕೇಂದ್ರದ ಸಂಯುಕ್ತಾಶ್ರಯದಲ್ಲಿ ತುಮಕೂರು ಜಿಲ್ಲೆಯಲ್ಲಿ ಸ್ವಂತ ಉದ್ದಿಮೆಯನ್ನು ಸ್ಥಾಪಿಸುವ ಆಸಕ್ತ ಪರಿಶಿಷ್ಟ ಪಂಗಡದ ಮಹಿಳೆಯರಿಗಾಗಿ 24 ದಿನಗಳ ಉಚಿತ ಕೌಶಲ್ಯಾಧಾರಿತ ಬ್ಯೂಟಿಷಿಯನ್ ಹಾಗೂ ಫ್ಯಾಶನ್ ಡಿಸೈನಿಂಗ್ ಕೋರ್ಸ್ ತರಬೇತಿ ನೀಡಲು ಅರ್ಜಿ ಅಹ್ವಾನಿಸಲಾಗಿದೆ.

ಕಾರ್ಯಕ್ರಮದಲ್ಲಿ ಬ್ಯೂಟಿಷಿಯನ್ ಕೋರ್ಸ್ ಹಾಗೂ ಫ್ಯಾಶನ್ ಡಿಸೈನಿಂಗ್ ಕೋರ್ಸ್ ತರಬೇತಿ ಉದ್ಯಮ ಕುರಿತ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತಾ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಉದ್ಯಮದಾರರಿಗೆ ದೊರೆಯುವ ಸೌಲಭ್ಯಗಳು ಮಾರುಕಟ್ಟೆ ಮುಂತಾದ ವಿಷಯಗಳ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು




ತರಬೇತಿಯಲ್ಲಿ ಮಾಹಿತಿಯನ್ನು ನೀಡಲಾಗುವುದು. ಜಿಲ್ಲೆಯ ಆಸಕ್ತ ಮಹಿಳೆಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಲು ಕೋರಲಾಗಿದೆ. ತರಬೇತಿಯು ಉಚಿತವಾಗಿದ್ದು, ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು ಮತ್ತು 35 ವರ್ಷದ ವಯೋಮಿತಿಯಲ್ಲಿ ಇರಬೇಕು.

ಭಾಗವಹಿಸುವವರು ಏಪ್ರಿಲ್ 22ರೊಳಗೆ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ತರಬೇತಿಯು ಏಪ್ರಿಲ್ 28 ರಿಂದ ಪ್ರಾರಂಭವಾಗುತ್ತದೆ. ತರಬೇತಿ ಮುಗಿದ ನಂತರ ಉದ್ಯಮ ಪ್ರಾರಂಭಿಸಲು ಬೆಂಬಲ ಸೇವೆ ನೀಡಲಾಗುವುದು.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ರಿಸರ್ವ್ ಪೋಲೀಸ್ ಮೈದಾನದ ಎದುರು, ಎಸ್.ಐ.ಟಿ.ಬಸ್ ನಿಲ್ದಾಣ, ತುಮಕೂರು ಅಥವಾ ಮೊ.ಸಂ. 7022746755ನ್ನು ಸಂಪರ್ಕಿಸಬಹುದಾಗಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ
: 9901010109

# ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯ ಸ್ಮಾರ್ಟ್ ಕಾರ್ಡ್ ವಿತರಣೆ



ರಾಜ್ಯ ಸರ್ಕಾರದ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯ ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲಾಯಿತು. ಕಾರ್ಮಿಕ ಇಲಾಖೆ ಮತ್ತು ತುಮಕೂರು ಜಿಲ್ಲಾ ಪುಟ್ ಪಾತ್ ವ್ಯಾಪಾರಿಗಳ ಸಂಘ (ರಿ) ಸಿಐಟಿಯು ವತಿಯಿಂದ ನಗರದ ಎಂಜಿ ರಸ್ತೆ ಹಾಗೂ ವಿವೇಕಾನಂದ ರಸ್ತೆಯ ಬೀದಿ ಬದಿ ವ್ಯಾಪಾರಿಗಳಿಗೆ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯ ಸ್ಮಾರ್ಟ್ ಕಾರ್ಡ್ ಕಾರ್ಮಿಕ ಅಧಿಕಾರಿ ಸನ್ಮಾನ್ಯ ಶ್ರೀ ಇಬ್ರಾಹಿಂ ಸಾಬ್ ವಿತರಿಸಿದರು.

ತುಮಕೂರು ಜಿಲ್ಲಾ ಪುಟ್ ಪಾತ್ ವ್ಯಾಪಾರಿಗಳ ಸಂಘ ದ ನಗರ ಪ್ರಧಾನ ಕಾರ್ಯದರ್ಶಿ ವಾಸೀಮ್ ಅಕ್ರಂ ಮಾತನಾಡಿ ಬೀದಿ ಬದಿ ವ್ಯಾಪಾರಿಗಳ ಮಕ್ಕಳು ದ್ವಿತೀಯ ಪಿಯುಸಿ ಹಾಗೂ ಎಸ್ ಎಸ್ ಎಲ್ ಸಿ ಅತಿ ಹೆಚ್ಚಿನ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಮತ್ತು ಸ್ಮಾರ್ಟ್ ಕಂಪ್ಯೂಟರ್. ಲ್ಯಾಬ್ ಟ್ಯಾಬ್. ವಿತರಿಸಬೇಕು ಎಂದು ಮನವಿ ಮಾಡಿಕೊಂಡರು.

ಸಂದರ್ಭದಲ್ಲಿ ಮುತ್ತುರಾಜು. ವ್ಯಾಪಾರಸ್ಥ ಹಾಜರಿದ್ದರು.

# ನಾರಿಶಕ್ತಿ ಬಗ್ಗೆ ಪ್ರಧಾನಿ ಮೋದಿಗೆ ಅಚಲ ವಿಶ್ವಾಸ: ಮೀಸಲಾತಿ ಬಗ್ಗೆ ಮಹಿಳಾ ಮೋರ್ಚಾದಿಂದ ಜಾಗೃತಿ

ತುಮಕೂರು: ಮಹಿಳಾ ಮೀಸಲಾತಿ ವಿರೋಧಿಸುವ ಪುರುಷಪ್ರಧಾನ ಮನಸ್ಥಿತಿಗಳನ್ನು ಮೆಟ್ಟಿನಿಂತು ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಮಹಿಳೆಯರಿಗೆ ಶೇಕಡ 33ರಷ್ಟು ಮೀಸಲಾತಿಯ ನಾರಿಶಕ್ತಿ ವಂದನ್ ಅಧಿನಿಯಮ ಜಾರಿಗೆ ತರಲು ಹೊರಟಿರುವುದು ಸ್ವಾಗತಾರ್ಹ. ಮಹಿಳೆಯರ ರಾಜಕೀಯ ಸ್ಥಾನಮಾನಕ್ಕಾಗಿ ಹಲವು ವರ್ಷಗಳಿಂದ ನಡೆದ ಹೋರಾಟಕ್ಕೆ ಮೋದಿ ನ್ಯಾಯ ಒದಗಿಸಲಿದ್ದಾರೆ ಎಂದು ರಾಜ್ಯ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಸಿ. ಮಂಜುಳಾ ಹೇಳಿದರು.

ಗುರುವಾರ ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ಮೋದಿಯವರು ಆದಿಚುಂಚನಗಿರಿಗೆ ಬಂದು ಕಾಲಭೈರವೇಶ್ವರನ ಹಾಗೂ ಚಾಮುಂಡೇಶ್ವರಿಯ ಆಶೀರ್ವಾದ ಪಡೆದುಹೋಗಿ ಲೋಕಸಭೆಯ ವಿಶೇಷ ಅಧಿವೇಶನದಲ್ಲಿ ನಾರಿಶಕ್ತಿ ವಂದನ್ ಅಧಿನಿಯಮ ಜಾರಿ ಮಾಡುತ್ತಿದ್ದಾರೆ. ಸೀತೆಯನ್ನು ರಾಮ, ದ್ರೌಪದಿಯನ್ನು ಕೃಷ್ಣ ರಕ್ಷಿಸಿದಂತೆ ರಾಜಕೀಯ ಸ್ಥಾನಮಾನ ಕಲ್ಪಿಸುವ ಮೂಲಕ ಮೋದಿಯವರು ದೇಶದ ಮಹಿಳೆಯರ ರಕ್ಷಣೆಯಲ್ಲಿದ್ದಾರೆ ಎಂದು ಅಭಿನಂದಿಸಿದರು.

ಲೋಕಸಭೆ ಹಾಗೂ ರಾಜ್ಯ ಶಾಸನಸಭೆಗಳಲ್ಲಿ ಮಹಿಳೆಯರಿಗೆ ಶೇಕಡ 33ರಷ್ಟು ಸ್ಥಾನ ಮೀಸಲಾತಿ ನೀಡುವುದರಿಂದ ಯಾವುದೇ ಸಮಸ್ಯೆಯಾಗುವುದಿಲ್ಲ,



ಯಾರ ಹಕ್ಕನ್ನೂ ಕಸಿದುಕೊಂಡಂತಾಗುವುದಿಲ್ಲ. ಲೋಕಸಭೆಯ ಕ್ಷೇತ್ರ ಮರುವಿಂಗಡನೆಯಿಂದ 543 ಕ್ಷೇತ್ರಗಳ ಬದಲು 816 ಕ್ಷೇತ್ರಗಳಾಗುತ್ತವೆ. ಹೆಚ್ಚುವರಿ ಕ್ಷೇತ್ರಗಳು ಮಹಿಳಾ ಮೀಸಲಾತಿ ಪ್ರಮಾಣಕ್ಕೆ ಪೂರಕವಾಗಿರುತ್ತವೆ ಎಂದು ಹೇಳಿದ ಮಂಜುಳಾ, ಮಹಿಳಾ ಮೀಸಲಾತಿ ಬಗ್ಗೆ ಕಾಂಗ್ರೆಸ್ ನಾಯಕರು ಒಂದಲ್ಲೊಂದು ರೀತಿಯಲ್ಲಿ ಆಕ್ಷೇಪ ಮಾಡುತ್ತಲೇ ಬಂದಿದ್ದಾರೆ. ಅವರು ಮಹಿಳೆಯರು ರಾಜಕೀಯ ಸ್ಥಾನ ಪಡೆಯವುದನ್ನು ಸಹಿಸುತ್ತಿಲ್ಲ ಎಂದು ಟೀಕಿಸಿದರು.

ಇಂದು ಎಲ್ಲಾ ಕ್ಷೇತ್ರಗಳಲ್ಲಿ ಸಮರ್ಥವಾಗಿ ಕೆಲಸ ಮಾಡುತ್ತಿರುವ ಮಹಿಳೆಯರಿಗೆ ದೇಶದ, ರಾಜ್ಯಗಳ ಆಡಳಿತ ಚುಕ್ಕಾಣಿ ಹಿಡಿಯುವ ಅರ್ಹತೆ, ಸಾಮರ್ಥ್ಯವಿದೆ ಎಂಬ ಅಚಲ ವಿಶ್ವಾಸ ಹೊಂದಿರುವ ಪ್ರಧಾನಿ ಮೋದಿಯವರು ಮಹಿಳಾ ಮೀಸಲಾತಿಯ ಎಲ್ಲಾ ಅಡ್ಡಿಗಳನ್ನು ನಿವಾರಣೆ ಮಾಡಿ ಜಾರಿಗೆ ತರಲು ಹೊರಟಿದ್ದಾರೆ. ಇದು ಅವರು ದೇಶದ ಮಹಿಳೆಯರಿಗೆ ಸಲ್ಲಿಸುವ ಗೌರವವಾಗಿದೆ ಎಂದು ಮಂಜುಳಾ ಹೇಳಿದರು.

ಮಹಿಳಾ ಮೀಸಲಾತಿ ಸಂಬಂಧ ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾದ್ಯಂತ ವಿವಿಧ ಕಾರ್ಯಕ್ರಮಗಳ ಮೂಲಕ ಮಹಿಳೆಯರಲ್ಲಿ ರಾಜಕೀಯ ಪ್ರಜ್ಞೆ, ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ. ಮಹಿಳೆಯರು ರಾಜಕೀಯ ಸ್ಥಾನಮಾನ ಪಡೆದು ಆಡಳಿತ ಚುಕ್ಕಾಣಿ ಹಿಡಿಯುವುದರಿಂದ ಆಡಳಿತಾತ್ಮಕವಾಗಿ ಹೊಸ ಬದಲಾವಣೆ ನಿರೀಕ್ಷಿಸಬಹುದು ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ವಕ್ತಾರರಾದ ಶ್ರೀವಲ್ಲಿ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಸುಮಿತ್ರಾದೇವಿ, ಜಿಲ್ಲಾ ಬಿಜೆಪಿ ಕಾರ್ಯದರ್ಶಿ ಜ್ಯೋತಿ ತಿಪ್ಪೇಸ್ವಾಮಿ, ಮಹಿಳಾ ಮೋರ್ಚಾ ನಗರ ಅಧ್ಯಕ್ಷೆ ವಸಂತ ಸುದರ್ಶನ್, ಪ್ರಧಾನ ಕಾರ್ಯದರ್ಶಿಗಳಾದ ನಾಗರತ್ನ, ಮಂಜುಳಾ ಲೋಕೇಶ್ ಹಾಜರಿದ್ದರು.

# ತಾಲೂಕು ಶಿಕ್ಷಕರ ಸಂಘಕ್ಕೆ ಪಧಾದಿಕಾರಿಗಳ ಅವಿರೋಧ ಆಯ್ಕೆ

ಕೊರಟಗೆರೆ ;– ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕೊರಟಗೆರೆ ತಾಲೂಕು ಘಟಕದ 2026–31 ನೇ ಸಾಲಿನ ಕಾರ್ಯಕಾರಿ ಸಮಿತಿಯ 12 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಎಲ್ಲಾ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ 8 ಪುರುಷ ಹಾಗೂ 4 ಮಹಿಳಾ ಸದಸ್ಯರು ಸೇರಿದಂತೆ ಒಟ್ಟು 12 ಮಂದಿ ಕಾರ್ಯಕಾರಿ ಸಮಿತಿ ಸ್ಥಾನಗಳಿಗೆ 19 ಮಂದಿ ಸ್ಪರ್ಧಾಕಾಂಕ್ಷಿಕಗಳು ನಾಮಪತ್ರ ಸಲ್ಲಿಸಿದ್ದರು, ನಂತರ ನಾಮಪತ್ರ ವಾಪಸ್ ಪಡೆಯುವ ಅಂತಿಮ ದಿನದಂದು ಶಿಕ್ಷಕ ಮುಖಂಡರು ಸಮಾಲೊಚನೆ ನಡೆಸಿ ಒಮ್ಮತದ ನಿರ್ಧಾರಕ್ಕೆ ಬಂದ ಹಿನ್ನಲೆಲಯಲ್ಲಿ 9 ಮಂದಿ ತಮ್ಮ ನಾಮಪತ್ರಗಳನ್ನು ಹಿಂಪಡೆದಿದ್ದು ಉಳಿದ 12 ಮಂದಿ ಅಭ್ಯರ್ಥಿಗಳು 2026 –31 ನೇ ಸಾಲಿಗೆ ಪಧಾದಿಕಾರಿಗಳಾಗಿ ಅವಿರೋಧವಾಗಿ ಆಯ್ಕೆ ಯಾಗಿದ್ದಾರೆ ಚುನಾವಣಾ ಅದಿಕಾರಿಯಾಗಿ ಚನ್ನವೀರಯ್ಯ ಕಾರ್ಯನಿರ್ವಹಿಸಿದ್ದರು.

2026–31 ನೇ ಸಾಲಿನ ಶಿಕ್ಷಕರ ಸಂಘಕ್ಕೆ ಅವಿರೋಧವಾಗಿ ಆಯ್ಕೆಯಾದ ಸದಸ್ಯರು ;– ಪರಮೇಶ್ವರಯ್ಯ, ಕೃಷ್ಣಮೂರ್ತಿ, ಬಿ.ಜಿ.ಹನುಮಂತರಾಯಪ್ಪ, ಎಂ.ಚಂದ್ರಯ್ಯ, ಬಿ.ಟಿ.ಲೋಕೇಶ್, ಎಂ.ಈಶ್ವರಯ್ಯ, ಎಸ್. ಎಂ.ಚಂದ್ರಯ್ಯ, ಹೆಚ್.ಶಿವರಾಮ್. ಅಸೂಯ, ಟಿ.ಆರ್.ಸಜಾತ, ಆರ್.ಗುಣಶೀಲ, ಎಂ.ಪಲ್ಲವಿ ಆಯ್ಕೆಯಾಗಿದ್ದಾರೆ, ಶಿಕ್ಷಕರ ಸಂಘಕ್ಕೆ ಆಯ್ಕೆಯಾದ ನೂತನ ಪಧಾದಿಕಾರಿಗಳಿಗೆ ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹೆಚ್.ಎಮ್,ರುದ್ರೇಶ್ ಅಭಿನಂದಿಸಿದ್ದಾರೆ.

# ಪುರಸಭೆ ಅಧಿಕಾರಿಗೆ ಆಡಳಿತ ಪಕ್ಷದ ಸದಸ್ಯರಿಂದ ತರಾಟೆ, ಪಿಕ್‌ನಿಕ್ ವಿರುದ್ಧ ಜನಾಕ್ರೋಶ

ರಾಮನಗರ: ಬಿಡದಿ ಪುರಸಭೆ ವ್ಯಾಪ್ತಿಯ ಸುಮಾರು ಆರೇಳು ವಾರ್ಡ್‌ಗಳಲ್ಲಿ ಎದುರಾಗಿರುವ ಕುಡಿಯುವ ನೀರಿನ ಅಭಾವವನ್ನು ನೀಗಿಸಲು ಕೊರೆದಿರುವ ಹೊಸ ಕೊಳವೆ ಬಾವಿಗಳಿಗೆ ಹಣ ಬಿಡುಗಡೆ ಮಾಡದೆ ಅಧಿಕಾರಿಗಳು ತಾತ್ಸಾರ ಮಾಡುತ್ತಿದ್ದಾರೆಂದು ಆಡಳಿತ ಪಕ್ಷದ ಸದಸ್ಯರೇ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಪ್ರಸಂಗ ನಡೆಯಿತು.



ಬೇಸಿಗೆ ಹಿನ್ನೆಲೆಯಲ್ಲಿ ಕೆಲವು ಕೊಳವೆ ಬಾವಿಗಳು ಡೆಡ್ ಆಗಿರುವ ಕಾರಣ ಬಿಡದಿ ಪುರಸಭೆ ವ್ಯಾಪ್ತಿಯ 2,5,7,9,10 ಮತ್ತು 13ನೇ ವಾರ್ಡ್‌ಗಳಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ. ಹಾಗಾಗಿ ಫೆಬ್ರವರಿಯಲ್ಲಿ ನಡೆದ ಪುರಸಭೆ ಸಾಮಾನ್ಯ ಸಭೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವ ವಾರ್ಡ್‌ಗಳಲ್ಲಿ ತುರ್ತಾಗಿ ಮ್ಯಾನುವೆಲ್ ಟೆಂಡರ್ ಮೂಲಕ ಕೊಳವೆ ಬಾವಿಗಳನ್ನು ಕೊರೆಯಲು ನಿರ್ಣಯಿಸಲಾಗಿತ್ತು. ಅದರಂತೆ ಸಮಸ್ಯೆ ಉಂಟಾಗಿರುವ ವಾರ್ಡ್‌ಗಳ ಸದಸ್ಯರು ಗುತ್ತಿಗೆದಾರನಿಂದ ಕೊಳವೆ ಬಾವಿಗಳನ್ನು ಕೊರೆಯಿಸಿದ್ದಾರೆ.

ಆದರೆ ಬೋರ್ ಕೊರೆದು ಒಂದು ತಿಂಗಳಾದರೂ ಅಧಿಕಾರಿಗಳು ಸಬೂಬು ಹೇಳುತ್ತಾ ಬಿಲ್ ಪಾವತಿಸಿಲ್ಲ. ಇದರಿಂದ ಕೆರಳಿದ ಪುರಸಭೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷರು ಹಾಲಿ ಸದಸ್ಯರಾದ ಜಿ.ಬಿ.ಲೋಹಿತ್ ಕುಮಾರ್ ಹಾಗೂ ಸದಸ್ಯ ಸೋಮಶೇಖರ್, ಮುಖಂಡ ಖಲೀಲ್ ಅವರುಗಳು ಬುಧವಾರ ಪುರಸಭೆ ಎಂಜಿನಿಯರ್ ಶ್ಯಾಮ್ ಅವರನ್ನು ಭೇಟಿ ಬಿಲ್ ವಿಳಂಭದ ಕುರಿತು ಕಾರಣ ಕೇಳಿದರು. ಈ ವೇಳೆ ಕೊಳವೆ ಬಾವಿಗಳಿಗೆ ಹೊಸ ಟೆಂಡರ್ ಕರೆಯಬೇಕಿದೆ ಇದೀಗ ಮ್ಯಾನುವೆಲ್ ಟೆಂಡರ್ ಮುಖೇನ ಕೊರೆದಿರುವ ಬೋರ್‌ಗಳಿಗೆ ಹಣ ಬಿಡುಗಡೆ ಮಾಡಲು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಒಪ್ಪುತ್ತಿಲ್ಲ ಎಂಬ ಉತ್ತರವನ್ನು ಶ್ಯಾಮ್ ನೀಡಿದರು.

ಇದರಿಂದ ಮತ್ತಷ್ಟು ಆಕ್ರೋಶಗೊಂಡ ಲೋಹಿತ್‌ಕುಮಾರ್, ಹಿಂದಿನ ಸಾಮಾನ್ಯ ಸಭೆಯಲ್ಲಿ ನಿರ್ಣಯವಾಗಿದ್ದರೂ ಸಹ ಮತ್ತೇಕೆ ಹೊಸ ವರಸೆ ತೆಗೆಯುತ್ತಿದ್ದೀರಿ? ಬಿಲ್ ಮಾಡಿಕೊಡಲು ಕಮೀಷನ್ ಕೊಡಬೇಕಾ? ಜನರಿಗೆ ನಾವು ಉತ್ತರ ಹೇಳಲಾಗುತ್ತಿಲ್ಲ. ನಮ್ಮಗಳ ಶಿಫಾರಸ್ಸು ಮತ್ತು ನಂಬಿಕೆಯ ಮೇಲೆ ಗುತ್ತಿಗೆದಾರ ಬೋರ್ ಕೊರೆದು ಪಂಪು ಮೋಟಾರ್ ಅಳವಡಿಸಿದ್ದಾರೆ. ನೀವು ಕೊರೆದಿರುವ ಬೋರ್‌ಗಳಿಗೆ ಬಿಲ್ ಪಾವತಿಸದಿದ್ದರೇ ಗುತ್ತಿಗೆದಾರ ಸಾಯಬೇಕಾ? ಪಂಪು ಮೋಟಾರ್ ಕಿತ್ತುಕೊಂಡು ಹೋದರೆ ಜನರಿಗೆ ನಾವು ಏನೆಂದು ಉತ್ತರ ಕೊಡಬೇಕು ಎಂದು ತರಾಟೆಗೆ ತೆಗೆದುಕೊಂಡರು.

ಸದಸ್ಯರ ಪ್ರಶ್ನೆಗಳಿಗೆ ಸಮರ್ಪಕವಾಗಿ ಉತ್ತರಿಸದೆ ಮುಖ್ಯಾಧಿಕಾರಿಗಳನ್ನು ಕರೆತರುವುದಾಗಿ ಹೇಳಿ ಎಂಜಿನಿಯರ್ ಶ್ಯಾಮ್ ಕಚೇರಿಯಿಂದ ನಿರ್ಗಮಿಸಿದರು. ನಂತರ ಎಷ್ಟೊತ್ತಾದರೂ ಬಾರದಿದ್ದಾಗ ಸದಸ್ಯರು ಬೇಸತ್ತು ಹೊರ ನಡೆದರು. ಶೀಘ್ರವೇ ವಾರ್ಡ್‌ಗಳ ಜನರನ್ನು ಸೇರಿಸಿ ಖಾಲಿ ಕೊಡಗಳನ್ನು ಹಿಡಿದು ಹೋರಾಟ ಮಾಡಲು ನಿರ್ಧರಿಸಿದರು. ತಮಟೆ ಚಳುವಳಿ ನಡೆಸಿ ಪುರಸಭೆಗೆ ಮುತ್ತಿಗೆ ಹಾಕಲು ತೀರ್ಮಾನಿಸಿದರು.

ಪಿಕ್‌ನಿಕ್ ವಿರುದ್ಧ ಜನಾಕ್ರೋಶ: ಜನರಿಗೆ ನೀರಿಲ್ಲದೆ ಹಾಹಾಕಾರ ಉಂಟಾಗಿರುವ ಸಮಯದಲ್ಲಿ ಪುರಸಭೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಹಮ್ಮಿಕೊಂಡಿರುವ 4 ದಿನಗಳ ಪಿಕ್‌ನಿಕ್ ಕುರಿತು ಜನಾಕ್ರೋಶ ವ್ಯಕ್ತವಾಗಿದೆ. ಸುಮಾರು 5ರಿಂದ 6 ವಾರ್ಡ್‌ಗಳಲ್ಲಿ ನೀರಿನ ಬವಣೆ ಎದುರಾಗಿದೆ. ಬಿಸಿಲ ತಾಪಮಾನ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ. ಇಂತಹ ಸಮಯದಲ್ಲಿ ಜನರ ಕುಂದುಕೊರತೆಗಳಿಗೆ ಸ್ಪಂದಿಸಬೇಕಾದ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಅಧ್ಯಯನ ಪ್ರವಾಸದ ಹೆಸರಲ್ಲಿ ಮೋಜು ಮಸ್ತಿಗಾಗಿ ಪಿಕಿನಿಕ್ ಹೊರಟಿದ್ದಾರೆಂಬ ಆಕ್ರೋಶ ನಾಗರಿಕರಿಂದ ವ್ಯಾಪಕವಾಗಿ ಕೇಳಿಬಂದಿದೆ.

ಪುರಸಭೆ ವತಿಯಿಂದ ಸ್ವಚ್ಛ ಭಾರತ್ ಮಿಷನ್ ನಿಧಿಯಡಿ ಗುಜರಾತ್‌ನ ಅಹಮದಾಬಾದ್‌ಗೆ 4 ದಿನಗಳ ಪ್ರವಾಸ ಹಮ್ಮಿಕೊಳ್ಳಲಾಗಿದ್ದು ಸುಮಾರು 50 ಜನರ ತಂಡ ಏ.16ರ ಬೆಳಿಗ್ಗೆ ಅಹಮದಾಬಾದ್‌ಗೆ ಪ್ರಯಾಣ ಬೆಳೆಸಲಿದ್ದಾರೆ. ಅಲ್ಲಿಂದ ಜಮ್ಮು ಕಾಶ್ಮೀರ ಮತ್ತಿತರ ಪ್ರೇಕ್ಷಣೀಯ ಸ್ಥಳಗಳಿಗೆ ಪ್ರವಾಸ ಹೊರಡುವುದಾಗಿ ಹೇಳಲಾಗುತ್ತಿದೆ. ಸರಕಾರದ ನಿಧಿಯಡಿ ಹೋಗುತ್ತಿರುವುದಾಗಿ ಅಧಿಕಾರಿಗಳು ಸಮಜಾಯಿಷಿ ನೀಡಿದರೂ ಸಹ ಬಿಸಿಲ ಬೇಗೆಯಲ್ಲಿ ಬಳಲುತ್ತಿರುವ ಜನರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸದೆ ಪ್ರವಾಸ ಹೊರಡುವುದು ಸೂಕ್ತವೇ? ಎಂಬ ಮಾತುಗಳು ಕೇಳಿಬಂದಿವೆ.

# ಸಿದ್ಧಾರ್ಥನಗರದಲ್ಲಿ ಸಂಭ್ರಮದ ಅಂಬೇಡ್ಕರ್ ಜಯಂತಿ ಆಚರಣೆ



ರಾಮನಗರ: ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ 135ನೇ ಜನ್ಮದಿನಾಚರಣೆಯನ್ನು ಬಿಡದಿಯ ಸಿದ್ಧಾರ್ಥನಗರದಲ್ಲಿ ಸಂಭ್ರಮ ಮತ್ತು ಸಡಗರದಿಂದ ಆಚರಿಸಲಾಯಿತು.

ಬಿಡದಿಯ ಬಾನಂದೂರಿನಿಂದ ಅಬ್ಬನಕುಪ್ಪೆಗೆ ಹೋಗುವ ರಸ್ತೆಯಲ್ಲಿರುವ ಹೊಸ ಬಡಾವಣೆ ಸಿದ್ಧಾರ್ಥ ನಗರದಲ್ಲಿ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್‌ರವರ ಜಯಂತೋತ್ಸವವನ್ನು ಛಲವಾದಿ ಮಹಾಸಭಾ ಜಿಲ್ಲಾಧ್ಯಕ್ಷರಾದ ಶೇಖರ್ ಅಂಚೀಪುರ ಹಾಗೂ ಪುರಸಭೆ ಸದಸ್ಯರಾದ ಶ್ರೀನಿವಾಸ್, ಮಹಿಮಾ ಕುಮಾರ್ ರವರು ಅಂಬೇಡ್ಕರ್‌ರವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಗೌರವಾರ್ಪಣೆ ಮಾಡಿದರು.

ಈ ವೇಳೆ ಶೇಖರ್ ಅಂಚೀಪುರ ಮಾತನಾಡಿ, ಶೋಷಿತ ವರ್ಗಕ್ಕೆ ಸಾಮಾಜಿಕ ನ್ಯಾಯ ದೊರಕಿಸಿಕೊಡುವ ಜತೆಗೆ ದೇಶದ ಎಲ್ಲಾ ವಾಸಿಗಳಿಗೂ ಸಮಾನತೆಯನ್ನು ಸಂವಿಧಾನದ ಮೂಲಕ ತಂದು ಕೊಟ್ಟ ನಾಯಕ ಅಂಬೇಡ್ಕರ್. ಸರ್ವರಿಗೂ ಸಮಬಾಳು–ಸಮಪಾಲು ತತ್ವವನ್ನು ಸಂವಿಧಾನದಲ್ಲಿ ಅಳವಡಿಸಿ ಶೋಷಿತ ಸಮಾಜಕ್ಕೆ ಸಾಮಾಜಿಕ ನ್ಯಾಯ ದೊರಕಿಸಿಕೊಟ್ಟ ಡಾ.ಬಿ.ಆರ್.ಅಂಬೇಡ್ಕರ್ ಅವರು ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಾಪನೆಯಲ್ಲಿಯೂ ಪ್ರಮುಖ ಪಾತ್ರವಹಿಸಿ ದೇಶದ ಆರ್ಥಿಕತೆಗೆ ಶಕ್ತಿ ತುಂಬಿದ್ದಾರೆ ಎಂದರು.

ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಆದರ್ಶಗಳು, ವಿಚಾರಗಳು ಕೇವಲ ಫ್ಲೆಕ್ಸ್‌ಗಳಿಗೆ ಹಾಗೂ ವೇದಿಕೆಗಳ ಭಾಷಣಗಳಿಗೆ ಸೀಮಿತವಾಗಬಾರದು, ಸಂವಿಧಾನದ ಮೂಲಕ ಸಮಾನತೆ ಸಾರಿದ ಮಹಾಮಾನವತಾವಾದಿ ಅಂಬೇಡ್ಕರ್‌ರವರು ಶೋಷಿತ ವರ್ಗಗಳಿಗೆ ಶಿಕ್ಷಣ ಎಂಬ ಶಕ್ತಿಯನ್ನು ತುಂಬಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಬೇಕೆಂಬ ಪ್ರಮುಖ ಉದ್ದೇಶ ಹೊಂದಿದ್ದರು, ಇದು ಸಾರ್ಥಕವಾಗಬೇಕಾದರೆ ಸಮಾಜ ಪ್ರತಿಯೊಬ್ಬರು ಅವರ ತತ್ವಾದರ್ಶಗಳನ್ನು ಪಾಲಿಸಬೇಕು ಎಂದು ತಿಳಿಸಿದರು. ಅಂಬೇಡ್ಕರ್ ಅವರ ಆದರ್ಶಗಳೇ ನಮ್ಮ ಜೀವನವನ್ನು ರೂಪಿಸುತ್ತಿವೆ ಹಾಗಾಗಿ ಅಂಬೇಡ್ಕರ್ ಜಯಂತಿಯನ್ನು ಆಚರಿಸುವುದು ನಮಗೆ ಹೆಮ್ಮೆಯ ವಿಷಯ ಎಂದರು.

ಈ ಸಂದರ್ಭದಲ್ಲಿ ಸಮುದಾಯದ ಮುಖಂಡರಾದ ಬೋರಮ್ಮ, ದಿನೇಶ್, ಶಿವಕುಮಾರ್, ರವಿ, ರಾಮಣ್ಣ, ಪುಟ್ಟಸ್ವಾಮಿ, ಮಹಾದೇವಯ್ಯ, ಇಟ್ಟಮಡು ಶ್ರೀಧರ್, ಲೋಕೇಶ್, ಬಾಲು, ಸಿದ್ದಪ್ಪಾಜಿ, ಹಾಗೂ ಊರಿನ ಗ್ರಾಮಸ್ಥರುಗಳಾದ ಬಾನಂದೂರು ಕುಮಾರ್, ದೀಪಕ್, ಗಿರೀಶ್, ಪ್ರಕಾಶ್, ಮೂರ್ತಿ, ಕುಮಾರ್, ಹರೀಶ್, ಮಲ್ಲೇಶ್, ವೆಂಕಟೇಶ್, ಸಿದ್ದರಾಜು ಮಂತಾದವರು ಭಾಗವಹಿಸಿದ್ದರು

# ಯೋಗೇಶ್ ಗೌಡ ಕೊಲೆ ಪ್ರಕರಣ: ವಿನಯ್ ಕುಲಕರ್ಣಿ ಸೇರಿ 17 ಅಪರಾಧಿಗಳಿಗೆ ಶಿಕ್ಷೆ ಪ್ರಮಾಣ ಪ್ರಕಟ ಬಾಕಿ

ಬೆಂಗಳೂರು: ಧಾರವಾಡ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದ ವಿಚಾರಣೆ ಆಲಿಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅಪರಾಧಿಗಳಿಗೆ ಶಿಕ್ಷೆಯ ಪ್ರಮಾಣವನ್ನು ಶುಕ್ರವಾರ ಪ್ರಕಟಿಸಲಿದೆ. ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅಪರಾಧಿ ಎಂದು ಕೋರ್ಟ್ ನಿನ್ನೆಯೇ ಘೋಷಿಸಿದ್ದು, ಶಿಕ್ಷೆಯ ಪ್ರಮಾಣ ಪ್ರಕಟವಾಗಲಿದೆ ಎನ್ನಲಾಗಿತ್ತು. ಇದೀಗ ನ್ಯಾಯಾಲಯ ತೀರ್ಪನ್ನು ಮುಂದೂಡಿದೆ.



### ಹತ್ತು ವರ್ಷಗಳಿಂದ ವಿಚಾರಣೆ

ಕಳೆದ 10 ವರ್ಷಗಳಿಂದ ಪ್ರಕರಣದ ತನಿಖೆ ನಡೆಯುತ್ತಿದ್ದು, ವಿನಯ್ ಕುಲಕರ್ಣಿ ಸೇರಿ 17 ಮಂದಿ ಅಪರಾಧಿಗಳು ಎಂದು ಜನಪ್ರತಿನಿಧಿ ನ್ಯಾಯಾಲಯದ ನ್ಯಾಯಾಧೀಶರಾದ ಸಂತೋಷ್ ಗಜಾನನ್ ಭಟ್ ಅವರು ತೀರ್ಪು ಪ್ರಕಟಿಸಿದ್ದರು. ಕೂಡಲೇ ಅವರನ್ನು ಸಿಬಿಐ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದು, ಅವರನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿಗೆ ಕರೆದೊಯ್ಯಲಾಗಿತ್ತು.

ಪ್ರಕರಣವನ್ನು ಸಿಬಿಐ ತನಿಖೆ ನಡೆಸಿದ್ದು, ಆರೋಪಿಗಳ ವಿರುದ್ಧ ಐಪಿಸಿ ಸೆಕ್ಷನ್120(ಬಿ) ಜೊತೆಗೆ 302, 217, 201, 143, 147, 148 ಜೊತೆಗೆ 149, ಶಸ್ತ್ರಾಸ್ತ್ರ ಕಾಯಿದೆ ಸೆಕ್ಷನ್ 25 ಜೊತೆಗೆ 3, 5, 8, 29 ಮತ್ತು ಭ್ರಷ್ಟಾಚಾರ ಪ್ರತಿಬಂಧಕ ಕಾಯಿದೆ ಸೆಕ್ಷನ್ 13(2) ಜೊತೆಗೆ 13(1)(ಡಿ) ಅಡಿ ಆರೋಪ ಪಟ್ಟಿ ಸಲ್ಲಿಸಿತ್ತು. ವಿನಯ್ ಕುಲಕರ್ಣಿ, ಇಬ್ಬರು ಪೊಲೀಸರು ಸೇರಿದಂತೆ ಒಟ್ಟು 21 ಆರೋಪಿಗಳನ್ನು ಆರೋಪ ಪಟ್ಟಿಯಲ್ಲಿ ಹೆಸರಿಸಲಾಗಿತ್ತು. ಆ ಪೈಕಿ 17 ಮಂದಿ ಮೇಲೆ ಅಪರಾಧ ಸಾಭೀತಾಗಿದೆ. 2016ರ ಜೂನ್‌ನಲ್ಲಿ ನಡೆದಿದ್ದ ಕೊಲೆ ಪ್ರಕರಣ ಇದಾಗಿದ್ದು 10 ವರ್ಷಗಳ ಸುದೀರ್ಘ ವಿಚಾರಣೆ ಬಳಿಕ ತೀರ್ಪು ಪ್ರಕಟವಾಗಿದೆ.

### ಕೊಲೆ ಪ್ರಕರಣದ ಹಿನ್ನೆಲೆ

2016 ಜೂನ್ 15 ರಂದು ಧಾರವಾಡದ ಸಪ್ತಾಪುರದಲ್ಲಿರುವ ಯೋಗೇಶ್ ಗೌಡ ಅವರದ್ದೇ ಒಡೆತನದ ಉದಯ್ ಜಿಮ್‌ನಲ್ಲಿ ಬೆಳಗಿನ ಜಾವ ಅವರು ದಿನಪತ್ರಿಕೆ ಓದುತ್ತಿದ್ದಾಗ, ಅಲ್ಲಿಗೆ ಬಂದ ದುಷ್ಕರ್ಮಿಗಳ ಗುಂಪೊಂದು ಅವರ ಕಣ್ಣಿಗೆ ಖಾರದ ಪುಡಿ ಎರಚಿ, ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿ ಪರಾರಿಯಾಗಿತ್ತು.

ಆರಂಭದಲ್ಲಿ ಸ್ಥಳೀಯ ಪೊಲೀಸರು ಈ ಪ್ರಕರಣವನ್ನು ರಿಯಲ್ ಎಸ್ಟೇಟ್ (ಆಸ್ತಿ) ವಿವಾದ ಮತ್ತು ವೈಯಕ್ತಿಕ ದ್ವೇಷದ ಹಿನ್ನೆಲೆಯಲ್ಲಿ ನಡೆದ ಕೊಲೆ ಎಂದು ತನಿಖೆ ನಡೆಸಿ, ಬಸವರಾಜ ಮುತ್ತಗಿ ಸೇರಿದಂತೆ ಆರು ಜನರನ್ನು ಬಂಧಿಸಿದ್ದರು. ಆದರೆ, ಯೋಗೇಶ್ ಗೌಡ ಅವರ ಸಹೋದರ ಗುರುನಾಥ ಗೌಡ ಮತ್ತು ಇತರ ಕುಟುಂಬಸ್ಥರು ಇದೊಂದು ರಾಜಕೀಯ ಪ್ರೇರಿತ ಹತ್ಯೆ ಎಂದು ಆರೋಪಿಸಿದರು.

ಈ ಹತ್ಯೆಯ ಹಿಂದೆ ಅಂದಿನ ಕಾಂಗ್ರೆಸ್ ಸರ್ಕಾರದಲ್ಲಿ ಗಣಿ ಮತ್ತು ಭೂವಿಜ್ಞಾನ ಸಚಿವರಾಗಿದ್ದ ಹಾಗೂ ಧಾರವಾಡದ ಪ್ರಭಾವಿ ನಾಯಕ ವಿನಯ್ ಕುಲಕರ್ಣಿ ಅವರ ಕೈವಾಡವಿದೆ ಎಂದು ಯೋಗೇಶ್ ಗೌಡ ಕುಟುಂಬಸ್ಥರು ಮತ್ತು ಬಿಜೆಪಿ ನಾಯಕರು ಗಂಭೀರ ಆರೋಪ ಮಾಡಿದರು. ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಯೋಗೇಶ್ ಗೌಡ ಅವರು ವಿನಯ್ ಕುಲಕರ್ಣಿ ಬೆಂಬಲಿತ ಅಭ್ಯರ್ಥಿಯನ್ನು ಸೋಲಿಸಿದ್ದರು, ಇದೇ ರಾಜಕೀಯ ದ್ವೇಷವೇ ಹತ್ಯೆಗೆ ಕಾರಣ ಎಂದು ಆರೋಪಿಸಲಾಯಿತು.

ಪ್ರಮುಖ ಆರೋಪಿಗಳು: ಸಂತೋಷ್, ಅಶ್ವತ್ಥ, ಸುನೀಲ್ ನಜ್ಮೀರ್ ಅಹ್ಮದ್, ಹರ್ಷಿತ್, ವಿನಯ್ ಕುಲಕರ್ಣಿ , ಶಿವಾನಂದ್, ಚನ್ನಕೇಶವ, ಬಸವರಾಜ್ ಮುತ್ತಗಿ , ಕೀರ್ತಿ ಕುಮಾರ್, ವಿನಾಯಕ್, ದಿನೇಶ್, ಶಹನವಾಜ್, ನೂತನ್, ಹರ್ಷಿತ್, ಚಂದ್ರಶೇಖರ ಇಂಡಿ, ಶಿವಾನಂದ್, ವಿಕಾಸ್, ವಾಸುದೇವ, ವಿಕ್ರಂ.

### ಸಿಬಿಐ ತನಿಖೆಗೆ ಹಸ್ತಾಂತರ

2019ರಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ, ಯೋಗೇಶ್ ಗೌಡ ಕುಟುಂಬದ ಒತ್ತಾಯದ ಮೇರೆಗೆ 2019ರ ಸೆಪ್ಟೆಂಬರ್‌ನಲ್ಲಿ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಯಿತು. ಸಿಬಿಐ ಅಧಿಕಾರಿಗಳು ತನಿಖೆ ಕೈಗೆತ್ತಿಕೊಂಡ ನಂತರ ಪ್ರಕರಣಕ್ಕೆ ದೊಡ್ಡ ತಿರುವು ಸಿಕ್ಕಿತು. ಸಾಕ್ಷ್ಯ ನಾಶ, ಬೆದರಿಕೆ ಮತ್ತು ಹತ್ಯೆಯ ಸಂಚು ರೂಪಿಸಿದ ಆರೋಪದ ಮೇಲೆ ನವೆಂಬರ್ 5, 2020 ರಂದು ಮಾಜಿ ಸಚಿವ ವಿನಯ್ ಕುಲಕರ್ಣಿ ಅವರನ್ನು ಸಿಬಿಐ ಬಂಧಿಸಿತು. ವಿನಯ್ ಕುಲಕರ್ಣಿ ಅವರ ಸಂಬಂಧಿ ಚಂದ್ರಶೇಖರ್ ಇಂಡಿ ಸೇರಿದಂತೆ ಇತರ ಕೆಲವರನ್ನೂ ಬಂಧಿಸಲಾಯಿತು. ಸಿಬಿಐ ಸಲ್ಲಿಸಿದ ಚಾರ್ಜ್‌ಶೀಟ್‌ನಲ್ಲಿ ವಿನಯ್ ಕುಲಕರ್ಣಿ ಅವರನ್ನು ಪ್ರಮುಖ ಆರೋಪಿ (೦1) ಎಂದು ಉಲ್ಲೇಖಿಸಲಾಯಿತು.

### ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಗೆ ಸುಪ್ರೀಂ ಕೋರ್ಟ್‌ನಿಂದ ಜಾಮೀನು

ವಿನಯ್ ಕುಲಕರ್ಣಿ ಅವರು ಸುಮಾರು 9 ತಿಂಗಳ ಕಾಲ ಬೆಳಗಾವಿಯ ಹಿಂಡಲಗಾ ಜೈಲಿನಲ್ಲಿದ್ದರು. ಆಗಸ್ಟ್ 2021ರಲ್ಲಿ ಸುಪ್ರೀಂ ಕೋರ್ಟ್ ಅವರಿಗೆ ಷರತ್ತುಬದ್ಧ ಜಾಮೀನು ನೀಡಿತು. ಪ್ರಮುಖ ಷರತ್ತೆಂದರೆ, ನ್ಯಾಯಾಲಯದ ಅನುಮತಿ ಇಲ್ಲದೆ ಅವರು ಧಾರವಾಡ ಜಿಲ್ಲೆಯನ್ನು ಪ್ರವೇಶಿಸುವಂತಿಲ್ಲ. ಈ ಷರತ್ತಿನ ಕಾರಣದಿಂದಲೇ 2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಟಿಕೆಟ್ ಪಡೆದು ಧಾರವಾಡ ಕ್ಷೇತ್ರದಿಂದ ಸ್ಪರ್ಧಿಸಿದ್ದ ವಿನಯ್ ಕುಲಕರ್ಣಿ ಅವರು, ಜಿಲ್ಲೆಯ ಗಡಿಯ ಹೊರಗಿದ್ದುಕೊಂಡೇ ಡಿಜಿಟಲ್ ಮತ್ತು ಪರೋಕ್ಷ ಪ್ರಚಾರ ಮಾಡಿ ಭಾರಿ ಬಹುಮತದಿಂದ ಜಯಗಳಿಸಿ ಶಾಸಕರಾದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ವಿವಿಧ “ಕನ್ನಡ ಪುಸ್ತಕ ಸೊಗಸು ಬಹುಮಾನ”ಗಳಿಗಾಗಿ ಅರ್ಜಿ ಆಹ್ವಾನ

ತುಮಕೂರು: ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2025ರ ಕ್ಯಾಲೆಂಡರ್ ವರ್ಷದಲ್ಲಿ(ಜನವರಿ ಯಿಂದ ಡಿಸೆಂಬರ್) ಕನ್ನಡದಲ್ಲಿ ಪ್ರಕಟವಾದ ಕೃತಿಗಳಿಗೆ, ಅವುಗಳ ಮುದ್ರಣ, ಮುಖಪುಟ ವಿನ್ಯಾಸ, ಗುಣಮಟ್ಟವನ್ನು ಪರಿಗಣಿಸಿ ವಿವಿಧ “ಕನ್ನಡ ಪುಸ್ತಕ ಸೊಗಸು ಬಹುಮಾನ” ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಪ್ರಕಾಶಕರು / ಮುದ್ರಕರು/ ಕಲಾವಿದರು ಅರ್ಜಿ ಸಲ್ಲಿಸಬಹುದಾಗಿದ್ದು, ಪುಸ್ತಕದ ಹೆಸರು, ಲೇಖಕರ ಹೆಸರು, ಪ್ರಕಟವಾದ ವರ್ಷ, ಪ್ರಕಾಶಕರ ಹೆಸರು, ಮುದ್ರಣಾಲಯದ ಹೆಸರು, ಮುಖಪುಟ ಚಿತ್ರ ರಚನೆಯ ಕಲಾವಿದರ ಹೆಸರು / ಚಿತ್ರ ಕಲಾವಿದರ ಪೂರ್ಣ ವಿಳಾಸ / ದೂರವಾಣಿ ಸಂಖ್ಯೆ ಸೇರಿದಂತೆ ಈ ಎಲ್ಲಾ ವಿವರಗಳೊಂದಿಗೆ ಪುಸ್ತಕದ ಎರಡು ಪ್ರತಿಗಳನ್ನು ಅರ್ಜಿ ನಮೂನೆಯೊಂದಿಗೆ ಮೇ 11ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು–560002 ಇವರಿಗೆ ಕಳುಹಿಸಿಕೊಡಬಹುದಾಗಿದೆ.

ಸಲ್ಲಿಸಲಾಗುವ ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸುವುದಿಲ್ಲ. ಕೊನೆಯ ದಿನಾಂಕ ಮುಗಿದ ನಂತರ ಬಂದ ಪುಸ್ತಕಗಳನ್ನು ಬಹುಮಾನಕ್ಕೆ ಪರಿಗಣಿಸಲಾಗುವುದಿಲ್ಲ.

ಅರ್ಜಿ ನಮೂನೆಯನ್ನು ವೆಬ್‌ಸೈಟ್ https://kpp.karnataka.gov.in ರಲ್ಲಿ ಪಡೆಯಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂ.ವಾ.ಸಂ. 080–22107704/ 22484516ನ್ನು ಸಂಪರ್ಕಿಸಬಹುದಾಗಿದೆ ಎಂದು ಆಡಳಿತಾಧಿಕಾರಿ ಕೆ.ಬಿ. ಕಿರಣ್‌ಸಿಂಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಖಾಸಗಿ ಅಂಬುಲೆನ್ಸ್ ಡ್ರೈವರ್‌ಗಳ ಕಾರ್ಯ ಮೆಚ್ಚಿ ಸನ್ಮಾನ

ಶಿರಾ :ಕಳೆದ ಏ. 14 ರಂದು ಶಿರಾ ತಾಲೂಕು ದ್ವಾರಾಳು ಬ್ರಿಡ್ಜ್ ಬಳಿ ಕೆ.ಎಸ್.ಆರ್.ಟಿ.ಸಿ. ಬಸ್ಸೊಂದು ಹಿಂದಿನಿಂದ ಕ್ಯಾಂಟರ್ ಲಾರಿಗೆ ಡಿಕ್ಕಿ ಹೊಡೆದ ಸುದ್ದಿ ತಿಳಿದ ತಕ್ಷಣ ಶಿರಾ ಸರಕಾರಿ ಆಸ್ಪತ್ರೆಯ ಮುಂಭಾಗದಲ್ಲಿರುವ ಸುಮಾರು 7ಕ್ಕೂ ಹೆಚ್ಚು ಖಾಸಗಿ ಆಂಬುಲೆನ್ಸ್‌ಗಳು ಅಪಘಾತ ನಡೆದ ಸ್ಥಳಕ್ಕೆ ಸ್ವಯಂ ಹೋಗಿ ರೋಗಿಗಳನ್ನು ಆಸ್ಪತ್ರೆಗೆ ಕರೆದಂದು ಸಾವುನೋವು ಸಂಭವಿಸುವುದನ್ನು ತಡೆದಿದ್ದರು.



ಸರಕಾರಿಅಂಬುಲೆನ್ಸ್‌ಗಳಜೊತೆಗೆಖಾಸಗಿ ಅಂಬುಲೆನ್ಸ್‌ಗಳು ಸಹ ಮಾನವೀಯತೆಯಿಂದ ಅಪಘಾತದಲ್ಲಿ ಗಾಯಗೊಂಡವರನ್ನು ಶಿರಾ ಸರಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ಕರೆತಂದು ಆ ನಂತರ ತುಮಕೂರಿಗೂ ಹೆಚ್ಚಿನ ಚಿಕಿತ್ಸೆಗೆ ಕೆಲವರನ್ನು ಕರೆದುಕೊಂಡು ಹೋಗಿದ್ದರು. ಖಾಸಗಿ ಅಂಬುಲೆನ್ಸ್ ಡ್ರೈವರ್‌ಗಳ ಈ ಕಾರ್ಯವನ್ನು ಶಿರಾ ಜನತೆ ಮೆಚ್ಚಿ ಶ್ಲಾಘನೆ ವ್ಯಕ್ತಪಡಿಸಿದ್ದರು. ಯಾವುದೇ ಪ್ರತಿಫಲಾಕ್ಷೆ ಇಲ್ಲದೆ ಅಪಘಾತಗಳು ನಡೆದ ಸಂದರ್ಭದಲ್ಲಿ ಈ ರೀತಿಯಲ್ಲಿ ಹಲವಾರು ಭಾರಿ ಮಾಡಿದ್ದಾರೆ. ಆದರೆ ಅವರಿಗೆ ಇದುವರೆಗೂ ಯಾವುದೇ ಜನಪ್ರತಿನಿಧಿಗಳು ಸಹಾಯ ಮಾಡಿರಲಿಲ್ಲ.

ಮೊನ್ನೆ ನಡೆದ ಅಪಘಾತದಲ್ಲಿ ಗಾಯಾಳುಗಳನ್ನು ಕರೆತಂದಿರುವುದಕ್ಕೆ ಶಿರಾ ನಗರ ಯುವ ಕಾಂಗ್ರೆಸ್ ಅಧ್ಯಕ್ಷರಾದ ಅಂಜನ್ ಕುಮಾರ್ ಹಾಗೂ ಎನ್.ಎಸ್.ಯು.ಐ. ಘಟಕದ ತಾಲೂಕು ಅಧ್ಯಕ್ಷರಾದ ರಂಗನಾಥ್ ಅವರು ಖಾಸಗಿ ಆಂಬುಲೆನ್ಸ್ ಡ್ರೈವರ್‌ಗಳಿಗೆ ಸನ್ಮಾನ ಮಾಡಿ ಪ್ರೋತ್ಸಾಹ ಧನ ವಿತರಣೆ ಮಾಡುವ ಮೂಲಕ ಪ್ರೋತ್ಸಾಹಿಸಿದರು. ಈ ಸಂದರ್ಭದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ.ಸಿದ್ದೇಶ್, ಅಂಬುಲೆನ್ಸ್ ಡ್ರೈವರ್‌ಗಳಾದ ಯೋಗೇಶ್, ವಿನೋದ್, ನಾಗೇಶ್, ಚೇತನ್, ಶರತ್, ಸುನಿಶೆಟ್ಟಿ, ಧನು, ರಕ್ಷಿತ್ ಗೌಡ, ನರಸಿಂಹ, ಸಾದಿಕ್, ಆಸಿಫ್ ಸೇರಿದಂತೆ ಹಲವರು ಹಾಜರಿದ್ದರು.

# ಎಲ್‌ಪಿಜಿ ಗ್ಯಾಸ್ ಸಮಸ್ಯೆ: ನಿವಾರಣೆ ಕ್ರಮಕ್ಕೆ ವಿಜಯಸೇನೆ ಆಗ್ರಹ

ತುಮಕೂರು: ಗ್ಯಾಸ್ ಅಭಾವದ ಕಾರಣವೊಡ್ಡಿ ನಗರದಲ್ಲಿ ಒಂದೊಂದು ಬಂಕ್‌ಗಳಲ್ಲಿ ಒಂದೊಂದು ರೀತಿಯಲ್ಲಿ ದುಬಾರಿ ಬೆಲೆಯಲ್ಲಿ ಎಲ್‌ಪಿಜಿ ಗ್ಯಾಸ್ ಮಾರಾಟ ಮಾಡುತ್ತಿರುವುದರಿಂದ ಆಟೋ ಚಾಲಕರ ತಮ್ಮ ವ್ಯವಹಾರ ನಿರ್ವಹಣೆ ಕಷ್ಟವಾಗಿದೆ. ಎಲ್ಲಾ ಬಂಕ್‌ಗಳಲ್ಲಿಯೂ ಏಕರೂಪದ ದರ ನಿಗಧಿ ಮಾಡಲು ಜಿಲ್ಲಾಡಳಿತ ಕ್ರಮ ತೆಗೆದುಕೊಳ್ಳಬೇಕು ಎಂದು ಕರುನಾಡ ವಿಜಯಸೇನೆ ರಾಜ್ಯಾಧ್ಯಕ್ಷ ಹೆಚ್.ಎನ್. ದೀಪಕ್ ಒತ್ತಾಯಿಸಿದರು.



ಗುರುವಾರ ನಗರದಲ್ಲಿ ನಡೆದ ಕರುನಾಡು ವಿಜಯಸೇನೆ ಸಂಘಟನೆ ಸೇರ್ಪಡೆ ಹಾಗೂ ಪದಾಧಿಕಾರಿಗಳ ನೇಮಕದ ಸಭೆಯಲ್ಲಿ ಮಾತನಾಡಿದ ಅವರು, ಗ್ಯಾಸ್ ಅಭಾವದಿಂದಾಗಿ ಆಟೋಚಾಲಕರ ವ್ಯವಹಾರ ಕಷ್ಟವಾಗಿ ಅವರು ಜೀವನ ನಿರ್ವಹಣೆ ಮಾಡಲಾಗುತ್ತಿಲ್ಲ. ಪಡೆದ ಸಾಲದ ಕಂತು, ಬಡ್ಡಿ ಕಟ್ಟಲಾಗುತ್ತಿಲ್ಲ. ಸಾಲಗಾರರ ಕಿರುಕುಳ ಹೆಚ್ಚಾಗಿದೆ. ಕೊರೊನಾ ಸಂದರ್ಭದಲ್ಲಿ ತುರ್ತು ಕ್ರಮ ತೆಗೆದುಕೊಂಡಂತೆ ಪ್ರಾಚ್ಯ ದೇಶಗಳ ಯುದ್ಧ ಮುಗಿಯುವವರೆಗೂ ಆಟೋ ಚಾಲಕರ ಮೇಲೆ ಒತ್ತಡ ಹಾಕಿ ಸಾಲ ವಸೂಲಿ ಮಾಡದಂತೆ ಬ್ಯಾಂಕ್ ಹಾಗೂ ಹಣಕಾಸು ಸಂಸ್ಥೆಗಳಿಗೆ ಸೂಚನೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಸಂಘಟನೆಗಳು ಸಮಾಜಮುಖಿಯಾಗಿ ಕೆಲಸ ಮಾಡಬೇಕು. ಕೇವಲ ಹೋರಾಟ, ಕಲ್ಲು ಹೊಡೆಯುವುದು, ಬೆಂಕಿ ಹಚ್ಚುವುದಷ್ಟೇ ಸಂಘಟನೆಗಳ ಗುರಿಯಲ್ಲ, ಸಮಾಜಕ್ಕೆ ನೆರವಾಗುವಂತಹ ಕಾರ್ಯಕ್ರಮಗಳನ್ನು ಮಾಡಬೇಕು. ಕರುನಾಡ ವಿಜಯಸೇನೆಯಿಂದ ಇದೂವರೆಗೆ 130 ಸರ್ಕಾರಿ ಶಾಲೆಗಳಿಗೆ ಬಣ್ಣ ಬಳಿಯುವ ಕೆಲಸ ಮಾಡಿದೆ, 500 ಶಾಲೆಗಳಿಗೆ ಬಣ್ಣ ಹೊಡೆದು, ಅಗತ್ಯ ಸೌಕರ್ಯಗಳನ್ನು ಒದಗಿಸಿ ಶಾಲೆಗಳ ಪುನಶ್ಚೇತನ ಮಾಡುವ ಕಾರ್ಯಕ್ರಮ ರೂಪಿಸಿದೆ. ಸರ್ಕಾರಿ ಶಾಲೆಗಳಲ್ಲಿ ಹೆಣ್ಣುಮಕ್ಕಳಿಗೆ ಶೌಚಾಲಯ ನಿರ್ಮಾಣ ಮಾಡಲಾಗಿದೆ. ಅಲ್ಲದೆ, ಆರೋಗ್ಯ ಶಿಬಿರ, ಉದ್ಯೋಗಮೇಳ ಮೊದಲಾದ ಹಲವು ಸಮಾಜಮುಖಿ ಕಾರ್ಯಗಳಲ್ಲಿ ವಿಜಯಸೇನೆ ತೊಡಗಿಕೊಂಡಿದೆ ಎಂದರು.

ಆಟೋಚಾಲಕ ಬದುಕು ಸಂಕಷ್ಟದಲ್ಲಿದೆ. ಈಗ ಎಲ್‌ಪಿಜಿ ಸಮಸ್ಯೆ ಜೊತೆಗೆ ಹೆಚ್ಚಿನ ಬಡ್ಡಿಗೆ ಸಾಲಪಡೆದು ತೊಂದರೆಪಡುವುದನ್ನು ತಪ್ಪಿಸಲು ಕರುನಾಡ ವಿಜಯಸೇನೆ ಆಟೋಚಾಲಕರ ಕಲ್ಯಾಣನಿಧಿ ಸ್ಥಾಪಿಸುವ ಉದ್ದೇಶ ಹೊಂದಿದೆ. ಇದರಿಂದ ಆಟೋಚಾಲಕರು ಸಣ್ಣ ಪ್ರಮಾಣದಲ್ಲಿ ಸಾಲಸೌಲಭ್ಯ ಪಡೆಯಲು ಸಹಾಯವಾಗುತ್ತದೆ ಎಂದು ಹೆಚ್.ಎನ್. ದೀಪಕ್ ಹೇಳಿದರು.

ಈ ವೇಳೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷರಾಗಿ ಕೆ.ಗಂಗಾಧರ್ ಹಾಗೂ ವಿವಿಧ ಘಟಕಗಳ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ವಿಜಯಸೇನೆ ರಾಜ್ಯ ಉಪಾಧ್ಯಕ್ಷ ಸಚ್ಚಿದಾನಂದ, ರಾಜ್ಯ ಕಾರ್ಯದರ್ಶಿ ರಂಜನ್, ಮಹಿಳಾ ಘಟಕ ರಾಜ್ಯ ಕಾರ್ಯದರ್ಶಿ ರಾಧಾ ಗಂಗಾಧರ್, ಜಿಲ್ಲಾಧ್ಯಕ್ಷೆ ಯಾಸ್ಮೀನ್ ತಾಜ್, ಆಟೋ ಘಟಕ ಜಿಲ್ಲಾಧ್ಯಕ್ಷ ತಿಪ್ಪೇಶ್, ನಗರ ಅಧ್ಯಕ್ಷ ರಾಕೇಶ್, ಎಸ್ಸಿ–ಎಸ್ಟಿ ಘಟಕ ಅಧ್ಯಕ್ಷ ನಾಗರಾಜು, ಮುಖಂಡರಾದ ಹರೀಶ್, ಕಾವ್ಯ, ರುದ್ರೇಶ್ ಮೊದಲಾದವರು ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಆರ್‌ಟಿಇ ಸೀಟು ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ ಬಡ ಪತ್ರಕರ್ತನ ಮಗ

ಆರ್ ಟಿ ಯಿ ಸೀಟು ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ ಬಡ ಪತ್ರಕರ್ತನ ಮಗ : ಸುಜನ್. ಎನ್ 10 ನೆಯ ತರಗತಿಯ CBSC board ಪರೀಕ್ಷೆಯಲ್ಲಿ 89.2 % (446/500) ಅಂಕ ಪಡೆದು ಡಿಸ್ಟಿಂಕ್ಷನ್ ನಲ್ಲಿ ತೇರ್ಗಡೆ ಹೊಂದಿದ್ದಾನೆ. ಇವನು ಬಡ ಪತ್ರಕರ್ತ ನಾದ ನರಸಿಂಹಮೂರ್ತಿ.ಜಿ ಹಾಗೂ ನಳಿನ ಎಲ್ ದಂಪತಿಯ ಪ್ರಥಮ ಮಗನಾಗಿದ್ದು .1 ರಿಂದ 10 ನೆಯ ತರಗತಿಯನ್ನು ಶ್ರೀ ಸಿದ್ದಗಂಗಾ ಮಠದ ಶ್ರೀ ಬಸವೇಶ್ವರ ಪಬ್ಲಿಕ್ ಶಾಲೆಯಲ್ಲಿ RTE ಸೀಟಿನಡಿ ಉಚಿತವಾಗಿ ಶಿಕ್ಷಣ ಹಾಗೂ ಅಧ್ಯಯನ ಮಾಡಿ ಉನ್ನತ ದರ್ಜೆಯಲ್ಲಿ ತೇರ್ಗಡೆ ಹೊಂದಿದ್ದಾನೆ. ಈ ಬಗ್ಗೆ ಶ್ರೀ ಬಸವೇಶ್ವರ ಪಬ್ಲಿಕ್ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರು ಸಂತೋಷ ವ್ಯಕ್ತ ಪಡಿಸಿದ್ದು ಮುಂದಿನ ಉನ್ನತ ಶಿಕ್ಷಣಕ್ಕೆ ಹಾರೈಸಿ ದ್ದಾರೆ. ಈ ವಿದ್ಯಾರ್ಥಿ 2023–2024 ನೆಯ ಸಾಲಿನಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದು ಈ ಬಗ್ಗೆ ಗೃಹ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಪ್ರಶಸ್ತಿ ಹಾಗೂ ಅಭಿನಂದನಾ ಪ್ರಮಾಣ ಪತ್ರ ಜೊತೆಗೆ ಆರ್ಥಿಕ ಸಹಾಯ ನೀಡಿದ್ದರು ಎಂಬುದು ಇಲ್ಲಿ ಗಮನಿಸಬೇಕಾದ ಅಂಶ. ಬಡ ಪತ್ರಕರ್ತ ನಾದ ನನ್ನ ಮಗನ ಈ ಸಾಧನೆಗೆ ಹೆಮ್ಮೆ ಹಾಗೂ ಅಭಿನಂದನೆ ಸಲ್ಲಿಸುತ್ತಾ , ನನ್ನಂತ ಬಡ ಪತ್ರಕರ್ತ ಮಗನ ಭವಿಷ್ಯ ರೂಪಿಸಿದ ಶ್ರೀ ಸಿದ್ಧಗಂಗಾ ಶಿಕ್ಷಣ ಸಂಸ್ಥೆಯು ಬಡ ಮಕ್ಕಳ ಶಿಕ್ಷಣಕ್ಕೆ ನೀಡುತ್ತಿರುವ ವಿದ್ಯಾ ದಾನ ಅನುಕರಣೀಯ ಹಾಗೂ ಈ ನಿಸ್ವಾರ್ಥ ಸೇವೆಯನ್ನು ಸದಾ ಸ್ಮರಿಸುತ್ತಾ ಚಿರಋಣಿಯಾಗಿದ್ದೇವೆ ಎಂದು ನರಸಿಂಹಮೂರ್ತಿ.ಜಿ ಅವರು ಸಂತಸ ಪಟ್ಟರು



# ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಕ್ರಮವಹಿಸಲು ಜಿಲ್ಲಾಧಿಕಾರಿ ಸೂಚನೆ

ತುಮಕೂರು: ಬೇಸಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ನಾಗರಿಕರಿಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕೇಸ್ವಾನ್ ಸಭಾಂಗಣದಲ್ಲಿ ವಿಡಿಯೋ ಸಂವಾದದ ಮೂಲಕ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ನಡೆಸಿ ಮಾತನಾಡಿದ ಅವರು, ಪೂರ್ವ ಮುಂಗಾರು ಮಳೆ ವರದಿ, ಹಾನಿಗಳ ವಿವರ ಮತ್ತು ಪೂರ್ವ ಸಿದ್ಧತೆಯ ಕ್ರಮಗಳ ಕುರಿತು ನಿರ್ದೇಶನ ನೀಡಿದರು.




ಕುಡಿಯುವ ನೀರಿನ ಸಮಸ್ಯೆ ಉಂಟಾಗದೇ ಇರುವ ರೀತಿ ಗ್ರಾಮ ಮತ್ತು ವಾರ್ಡುಗಳಲ್ಲಿ ಕೈಗೊಂಡಿರುವ ಕ್ರಮಗಳ ಬಗ್ಗೆ, ಕುಡಿಯುವ ನೀರಿನ ಮೂಲಗಳ ಪರೀಕ್ಷೆ, ಸ್ವಚ್ಛತೆ ಮತ್ತು ಕೋರಿನೇಶನ್ ಪ್ರಗತಿ, ಸರ್ಕಾರಿ ಶಾಲೆ, ವಸತಿ ನಿಲಯಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಪರೀಕ್ಷೆಯ ಕ್ರಮಗಳು, ಬೆಳೆ ಸಮೀಕ್ಷೆ ಮತ್ತು ಬೆಳೆ ವಿಮೆಯ ಪ್ರಗತಿ, ಅರಣ್ಯ ಪ್ರದೇಶಗಳ ಗಡಿಗಳಲ್ಲಿ ಕಾಡು ಪ್ರಾಣಿ ದಾಳಿ ನಿಯಂತ್ರಣ, ಕಾಡ್ಗಿಚ್ಚು ಮತ್ತು ಆಕಸ್ಮಿಕ ಬೆಂಕಿ ಅನಾಹುತಗಳ ನಿಯಂತ್ರಣ ಬಗ್ಗೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಹುಳಿಯಾರಿನಲ್ಲಿ ತಪ್ಪಿದ ಬಸ್ ದುರಂತ: ಡೀಸೆಲ್ ಪೈಪ್ ತುಂಡಾಗಿ, ಸೋರಿಕೆಯಿಂದ ಇಂಜಿನ್ ಬಳಿ ಬೆಂಕಿ

ಹುಳಿಯಾರು: ಹುಳಿಯಾರಿನ ಕನಕ ಸರ್ಕಲ್‌ನ ಪ್ರವಾಸಿ ಮಂದಿರದ ಬಳಿ ಗುರುವಾರ ಬೆಳಿಗ್ಗೆ 12 ಗಂಟೆ ಸುಮಾರಿಗೆ ಕೆಎಸ್‌ಆರ್ಟಿಸಿ ಬಸ್ಸೊಂದರಲ್ಲಿ ಡೀಸೆಲ್ ಪೈಪ್ ತುಂಡಾಗಿ, ಸೋರಿಕೆಯಿಂದ ಇಂಜಿನ್ ಬಳಿ ಬೆಂಕಿ ಕಾಣಿಸಿಕೊಂಡು, ಪ್ರಯಾಣಿಕರು ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಈ ಘಟನೆಯು ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆಯ ತುರ್ತು ಅಗತ್ಯತೆಯನ್ನು ಮತ್ತೊಮ್ಮೆ ಎತ್ತಿ ತೋರಿಸಿದ್ದು, ಠಾಣೆ ಸ್ಥಾಪನೆಯೂ ತಡವಾಗುತ್ತಿರುವುದರ ಬಗ್ಗೆ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.




**ಘಟನೆಯ ವಿವರ:** ಹುಳಿಯಾರಿನಿಂದ ಅರಸೀಕೆರೆಗೆ ಹೊರಟಿದ್ದ ಕೆಎಸ್‌ಆರ್ಟಿಸಿ ಬಸ್ಸು (ಎಂ18 ಈ0857)ಪ್ರವಾಸಿ ಮಂದಿರದ ಬಳಿ ಚಲಿಸುತ್ತಿದ್ದಾಗ, ಇಂಜಿನ್ ಭಾಗದಲ್ಲಿ ಡೀಸೆಲ್ ಸೋರಿಕೆಯಾಗಿ ಬ್ಯಾಟರಿ ಕೇಬಲ್‌ನಲ್ಲಿ ಶಾರ್ಟ್ ಸರ್ಕ್ಯೂಟ್ ಉಂಟಾಗಿದೆ. ತಕ್ಷಣವೇ ಬೆಂಕಿ ಹತ್ತಿಕೊಂಡಿದ್ದು, ಬಸ್ಸಿನ ಒಳಗೆ ದಟ್ಟವಾದ ಹೊಗೆ ತುಂಬಿಕೊಂಡಿದೆ. ಇದನ್ನು ಗಮನಿಸಿದ ಅಕ್ಕಪಕ್ಕದ ಅಂಗಡಿಯವರು ಮತ್ತು ಸಾರ್ವಜನಿಕರು ತಕ್ಷಣ ಚಾಲಕನ ಗಮನಕ್ಕೆ ತಂದರು. ಅದೃಷ್ಟವಶಾತ್ ಬಸ್ಸಿನ ಹಿಂಭಾಗದ ಬಾಗಿಲು ತೆರೆದಿದ್ದರಿಂದ ಪ್ರಯಾಣಿಕರು ತಕ್ಷಣವೇ ಕೆಳಗಿಳಿದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಪಕ್ಕದಲ್ಲೇ ಬೇಕರಿ, ಹಣ್ಣಿನ ಅಂಗಡಿ ಮತ್ತು ಮನೆಗಳಿದ್ದೂ , ಸ್ಥಳೀಯರು ಮರಳು ಮತ್ತು ನೀರನ್ನು ಹಾಕಿ ಸಮಯಪ್ರಜ್ಞೆಯಿಂದ ಬೆಂಕಿ ನಂದಿಸಿದ್ದರಿಂದ ದೊಡ್ಡ ಅನಾಹುತ ತಪ್ಪಿದಂತಾಗಿದೆ.

**ಬಜರಂಗದಳದ ಬಸವರಾಜು ಹೇಳಿಕೆ :** ಘಟನಾ ಸ್ಥಳದಲ್ಲಿದ್ದ ಬಜರಂಗದಳದ ಅಧ್ಯಕ್ಷ ಬಸವರಾಜು ಅವರು ಸರ್ಕಾರದ ವಿಳಂಬ ನೀತಿಯನ್ನು ಖಂಡಿಸಿದರು. ಹುಳಿಯಾರಿಗೆ ಅಗ್ನಿಶಾಮಕಟಣೆಯ ತುರ್ತು ಅಗತ್ಯವಿದ್ದು ಸೌಲಭ್ಯಗಳ ಕೊರತೆ ಎದ್ದು ಕಾಣುತ್ತಿದೆ. ಮೊನ್ನೆ ಕೆಂಚಮ್ಮನ ತೋಪಿನ ತೋಟದಲ್ಲಿ ಬೆಂಕಿ ಬಿದ್ದು ಅಪಾರ ನಷ್ಟವಾಯಿತು, ನಿನ್ನೆ ಸೋಮಜನಪಾಳ್ಯದಲ್ಲಿ 10–15 ಎಕರೆ ಜಮೀನು ಬೆಂಕಿಗೆ ಆಹುತಿಯಾಯಿತು. ಅಪ್ಪಿತಪ್ಪಿ ಈ ಬಸ್ಸು ಮನೆಗಳ ಬಳಿ ಸುಟ್ಟು ಹೋಗಿದ್ದರೆ ಜನರ ಪ್ರಾಣ ಉಳಿಸುವವರು ಯಾರು? ಆಡಳಿತ ವ್ಯವಸ್ಥೆ ತಕ್ಷಣವೇ ಎಚ್ಚೆತ್ತು ಹುಳಿಯಾರಿಗೆ ಅಗ್ನಿಶಾಮಕ ಠಾಣೆಯನ್ನು ಮಂಜೂರು ಮಾಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

**ಎಬಿವಿಪಿ ಗುರು ಆಕ್ರೋಶ:** ಎಬಿವಿಪಿ ಸಂಚಾಲಕ ಗುರು ಅವರು ಸಾರಿಗೆ ವ್ಯವಸ್ಥೆ ಮತ್ತು ಸರ್ಕಾರದ ವೈಫಲ್ಯದ ಬಗ್ಗೆ ಮಾತನಾಡಿ ಇಡೀ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದ್ದ ಕೆಎಸ್‌ಆರ್ಟಿಸಿ ಇಂದು ಗ್ಯಾರಂಟಿ ಯೋಜನೆಗಳ ಅಬ್ಬರದಲ್ಲಿ ನಿರ್ವಹಣೆಯಿಲ್ಲದೆ ಸೊರಗುತ್ತಿದೆ. 40–50 ಪ್ರಯಾಣಿಕರಿದ್ದ ಬಸ್ಸು ಸುಟ್ಟು ಹೋಗಿದ್ದರೆ ಅದಕ್ಕೆ ಹೊಣೆ ಯಾರು? ಅಧಿಕಾರಿಗಳು ಎಸಿ ಕಾರುಗಳಲ್ಲಿ ತಿರುಗಾಡುತ್ತಿದ್ದಾರೆ, ಆದರೆ ಹಳ್ಳಿಯ ಜನರ ಬದುಕು ದುಸ್ತರವಾಗಿದೆ. ಹುಳಿಯಾರಿಗೆ ತಕ್ಷಣವೇ ಕನಿಷ್ಠ ಒಂದು ರಿಸರ್ವ್ ಅಗ್ನಿಶಾಮಕ ವಾಹನವನ್ನಾದರೂ ನಿಯೋಜಿಸಬೇಕು. ಇಲ್ಲದಿದ್ದರೆ ಜನರೇ ಸರ್ಕಾರದ ವಿರುದ್ಧ ಬೀದಿಗಿಳಿಯಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

**ಸಾರ್ವಜನಿಕರ ಆಗ್ರಹ:**

ಕಳೆದ ಒಂದು ವಾರದಲ್ಲಿ ಹುಳಿಯಾರು ಸುತ್ತಮುತ್ತ ನಾಲ್ಕೈದು ಬೆಂಕಿ ಅವಘಡಗಳು ಸಂಭವಿಸಿದ್ದು, ರೈತರು ಅಪಾರ ತೆಂಗಿನ ತೋಟಗಳನ್ನು ಕಳೆದುಕೊಂಡಿದ್ದಾರೆ. ಪ್ರತಿ ಬಾರಿ ಅನಾಹುತ ಸಂಭವಿಸಿದಾಗ ಅಗ್ನಿಶಾಮಕ ಠಾಣೆಯ ಚರ್ಚೆ ಬರುತ್ತದೆ, ನಂತರ ತಣ್ಣಗಾಗುತ್ತದೆ. ಈ ಬಾರಿಯಾದರೂ ಸರ್ಕಾರ ಎಚ್ಚೆತ್ತುಕೊಂಡು ಶಾಶ್ವತ ಪರಿಹಾರ ಕಲ್ಪಿಸುವುದೇ ಎಂಬುದು ಜನರ ಪ್ರಶ್ನೆಯಾಗಿದೆ.

ಹುಳಿಯಾರು ಭಾಗದಲ್ಲಿ ಅಗ್ನಿಶಾಮಕ ಠಾಣೆ ಸ್ಥಾಪಿಸಲು ಈಗಾಗಲೇ ಸರ್ಕಾರದೊಂದಿಗೆ ಪತ್ರವ್ಯವಹಾರ ನಡೆಸಲಾಗಿದೆ. ಕಂಪನಹಳ್ಳಿ ಬಳಿಯ ಸರ್ವೆ ನಂಬರ್ 23ರಲ್ಲಿ ಜಾಗ ಗುರುತಿಸಲಾಗಿದ್ದು, ಪ್ರಕ್ರಿಯೆ ಪ್ರಗತಿಯಲ್ಲಿದೆ. ಪ್ರಸ್ತುತ ತಾಲ್ಲೂಕು ಕೇಂದ್ರದಲ್ಲಿರುವ ಒಂದು ವಾಹನದ ಜೊತೆಗೆ ಹೆಚ್ಚುವರಿಯಾಗಿ ಮತ್ತೊಂದು ವಾಹನ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ **: ಶಾಸಕ ಸಿ.ಬಿ. ಸುರೇಶ್ ಬಾಬು**



ತುಮಕೂರಿನಲ್ಲಿ ಬಿರು ಬಿಸಿಲಿನ ತಾಪವನ್ನು ತಾಳಲಾರದೆ ಶ್ರೀದೇವಿ ಕಾಲೇಜಿನ ವಿದ್ಯಾರ್ಥಿಗಳು ಛತ್ರಿಗಳನ್ನು ಹಿಡಿದು ತೆರಳುತ್ತಿರುವ ದೃಶ್ಯ.

# ಏ.24ರಂದು ಕೆಡಿಪಿ ಸಭೆ

ತುಮಕೂರು: ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರ ಅಧ್ಯಕ್ಷತೆಯಲ್ಲಿ ಏಪ್ರಿಲ್ 24ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಶ್ವಿಜ ಬಿ.ವಿ. ತಿಳಿಸಿದ್ದಾರೆ.



ತುಮಕೂರಿನ ಬೀದಿ ಬದಿ ವ್ಯಾಪಾರಸ್ಥರ ಸಂಘಕ್ಕೆ ಸಮಾಜ ಸೇವಕ ನಟರಾಜ್ ಅವರು ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ದಿನ ಮೈಕ್‌ಸೆಟ್ ಹಾಗೂ ಸೌಂಡ್‌ಬಾಕ್ಸ್ ಕೊಡುಗೆಯಾಗಿ ನೀಡಿದರು. ಸಂಘದ ಅಧ್ಯಕ್ಷ ಎಂ.ಗೋಪಿ, ಉಪಾಧ್ಯಕ್ಷ ಆದಿಲ್ ಹಾಗೂ ಮಹಿಳಾ ಘಟಕದ ಅಧ್ಯಕ್ಷೆ ರಮ್ಯಾ ಹಾಜರಿದ್ದರು.



ಪೋಟೋ ಕ್ಯಾಪ್ಶನ್ : ಹುಳಿಯಾರು ಪಟ್ಟಣದಲ್ಲಿ ಛಲವಾದಿ ಶ್ರೀ ರಾಮಸೇವಾ ಛಾರಿಟಬಲ್ ಟ್ರಸ್ಟ್ ಹುಳಿಯಾರು ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಈ ಸಂಧರ್ಭದಲ್ಲಿ ಪಟ್ಟಣ ಪಂಚಾಯಿತಿಯ ಮಾಜಿ ಸದಸ್ಯ ರಾಘವೇಂದ್ರ, ಮಂಜುನಾಥ್, ಲವ ಇನ್ನಿತರರು ಇದ್ದರು

# ಒಳಮೀಸಲಾತಿ ಜಾರಿಗೊಳಿಸದ ಹಿನ್ನೆಲೆ ಅಂಬೇಡ್ಕರ್ ಜಯಂತಿ ಬಹಿಷ್ಕರಿಸಿ ಹೊರಗುಳಿದ ದಲಿತ ಮುಖಂಡರು

ಮಧುಗಿರಿ: ಸರ್ಕಾರವು ಒಳ ಮೀಸಲಾತಿಯನ್ನು ಜಾರಿಗೊಳಿಸಿದಿರುವುದನ್ನು ವಿರೋಧಿಸಿ ಕೆಲ ದಲಿತ ಪರ ಸಂಘಟನೆಗಳ ಪದಾಧಿಕಾರಿಗಳು ತಾಲೂಕು ಆಡಳಿತದಿಂದ ಆಯೋಜಿಸಲಾಗಿದ್ದ 135 ನೇ ಡಾ ಬಿ.ಆರ್ ಅಂಬೇಡ್ಕರ್ ಜಯಂತಿಗೆ ದಲಿತ ಮುಖಂಡರು ಭಾಗವಹಿಸದೆ ಬಹಿಷ್ಕರಿಸಿ ಸರಳವಾಗಿ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಸಿಹಿ ಹಂಚಿ ಆಚರಿಸಿದರು.



ಕರ್ನಾಟಕ ಶೋಷಿತರ ಭೂಮಿ ಹಕ್ಕು ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಟಿ.ಹೆಚ್ ಮೈಲಾರಪ್ಪ ಮಾತನಾಡಿ ಮಾದಿಗ ಸಮುದಾಯ ಸುಮಾರು 35 ವರ್ಷಗಳಿಂದ ಒಳಮೀಸಲಾತಿಗಾಗಿ ಹೋರಾಟಗಳನ್ನು ಮಾಡುತ್ತ ಬಂದಿದ್ದು ಈ ಹೋರಾಟದಲ್ಲಿ ರಾಜ್ಯಾದ್ಯಂತ ನಮ್ಮ ಸಮುದಾಯವು ಅನೇಕ ಸಾವು, ನೋವು ಕಂಡಿದೆ. ಸರ್ಕಾರ ಹಲವು ಕೋಟಿ ರೂಗಳನ್ನು ವೆಚ್ಚ ಮಾಡಿ ಸಮೀಕ್ಷೆ ಯನ್ನು ಹಲವು ಬಾರಿ ಮಾಡಿದರೂ ಸಹ ಅನ್ಯಾಯ ಆಗಿರುವ ಸಮುದಾಯಕ್ಕೆ ನ್ಯಾಯ ಒದಗಿಸಿಲ್ಲ. ಈ ರಾಜ್ಯ ಸರ್ಕಾರವು ಹಲವಾರು ರೀತಿ ನಾಟಕ ಪ್ರದರ್ಶಿಸುತ್ತ ನಮಗೆ ವಂಚಿಸುತ್ತಿದೆ. ಮುಂದಿನ ದಿನಗಳಲ್ಲಿ ಇಂತಹ ಸರ್ಕಾರವನ್ನು ಸೋಲಿಸಿ ಬುದ್ದಿಕಲಿಸಿ ನಮ್ಮ ಹಕ್ಕು ನಾವು ಪಡೆದುಕೊಳ್ಳುವಲ್ಲಿ ನಾವುಗಳು ಯಶಸ್ವಿ ಯಾಗಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಆಲ್ ಇಂಡಿಯಾ ಬಿಎಸ್ಪಿ ಮುಖಂಡ ತೆರಿಯೂರು ಅಂಜಯ್ಯ,ತಾ.ಅಧ್ಯಕ್ಷ ಗರಣಿ ನಾಗಭೂಷಣ್,ಡಿ,ಎಸ್ ಎಸ್ ತಾಲ್ಲೂಕು ಸಂಚಾಲಕ ಎಂ .ವೈ.ಶಿವಕುಮಾರ್, ನಾಗರಾಜು ಶ್ರಾವಂಡನಹಳ್ಳಿ,ನರಸಿಂಹಮೂರ್ತಿ,ರಂಗನಾಥ್ ಹಾಗೂ ಹಲವು ದಲಿತ ಮುಖಂಡರು ಹಾಜರಿದ್ದರು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ **ಸೂರ್ಯಪ್ರಗತಿ** ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

# ಋತುಸ್ರಾವ ರಜೆ ಎಲ್ಲ ಕಂಪನಿಗಳಲ್ಲಿ ಕಡ್ಡಾಯ: ಹೈಕೋರ್ಟ್ ನಿರ್ದೇಶನ

ಬೆಂಗಳೂರು: ಮಹಿಳೆಯರ ಆರೋಗ್ಯ ಮತ್ತು ಘನತೆಯನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಕರ್ನಾಟಕ ಹೈಕೋರ್ಟ್ ಐತಿಹಾಸಿಕ ತೀರ್ಪು ನೀಡಿದೆ. 18 ರಿಂದ 52 ವರ್ಷದೊಳಗಿನ ಮಹಿಳಾ ಉದ್ಯೋಗಿಗಳಿಗೆ ಪ್ರತಿ ತಿಂಗಳು ಒಂದು ದಿನದ ವೇತನ ಸಹಿತ 'ಋತುಸ್ರಾವ ರಜೆ' ನೀತಿಯನ್ನು ರಾಜ್ಯ ಸರ್ಕಾರವು "ಕಟ್ಟುನಿಟ್ಟಾಗಿ ಮತ್ತು ನಂಬಿಕಸ್ತವಾಗಿ" ಜಾರಿಗೆ ತರಬೇಕು ಎಂದು ಕೋರ್ಟ್ ನಿರ್ದೇಶಿಸಿದೆ.

ಈ ಹಿಂದೆ ರಾಜ್ಯ ಸರ್ಕಾರ ಮಹಿಳೆಯರ ಮುಟ್ಟಿನ ರಜೆಗೆ ಅನುಮೋದನೆಯನ್ನು ನೀಡಿತ್ತು. ಆದರೆ ಕೆಲವೊಂದು ಕಂಪನಿಗಳು ಹಾಗೂ ಸಂಸ್ಥೆಗಳು ತಮ್ಮ ಮಹಿಳಾ ಉದ್ಯೋಗಿಗಳಿಗೆ ನೀಡಲು ಹಿಂದೆ–ಮುಂದೆ ನೋಡುತ್ತಿದೆ. ಹಾಗಾಗಿ ಇದನ್ನು ಸರಿಯಾದ ರೀತಿಯಲ್ಲಿ ಹಾಗೂ ಕಡ್ಡಾಯವಾಗಿ ಜಾರಿಗೆ ತರುವಂತೆ ಆದೇಶವನ್ನು ಹೈಕೋರ್ಟ್ ನೀಡಿದೆ.ನೋಂದಾಯಿತ ಸಂಸ್ಥೆಗಳಲ್ಲಿ ಕೆಲಸ ಮಾಡುವ 18 ರಿಂದ 52 ವರ್ಷದೊಳಗಿನ ಎಲ್ಲಾ ಮಹಿಳಾ ನೌಕರರಿಗೆ ಈ ರಜೆ ಅನ್ವಯವಾಗುತ್ತದೆ. ಶಾಶ್ವತ, ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರಿಗೂ ಈ ವಿಸ್ತರಣೆ ಮಾಡಬೇಕು ಎಂದು ಹೇಳಿದೆ.ಕೇವಲ ಸಾಫ್ಟ್‌ವೇರ್ ಅಥವಾ ದೊಡ್ಡ ಕಂಪನಿಗಳಲ್ಲದೆ, ಹೋಟೆಲ್ ಕೆಲಸಗಾರರು, ದಿನಗೂಲಿ ನೌಕರರು ಸೇರಿದಂತೆ ಅಸಂಘಟಿತ ವಲಯದ ಮಹಿಳೆಯರಿಗೂ ಈ ಸೌಲಭ್ಯ ತಲುಪುವಂತೆ ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರಕ್ಕೆ ಸೂಚಿಸಲಾಗಿದೆ.

ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಪೀಠವು, "ಮಹಿಳೆಯರ ಋತುಸ್ರಾವದ ಆರೋಗ್ಯವು ಸಂವಿಧಾನದ 21ನೇ ವಿಧಿಯಡಿ ಬರುವ 'ಬದುಕುವ ಹಕ್ಕಿನ' ಅವಿಭಾಜ್ಯ ಅಂಗವಾಗಿದೆ. ಇದು ಕೇವಲ ರಜೆಯಲ್ಲ, ಮಹಿಳೆಯರ ಘನತೆಯ ಪ್ರಶ್ನೆ" ಎಂದು ಅಭಿಪ್ರಾಯಪಟ್ಟಿದೆ. ಪ್ರಸ್ತುತ ನೀತಿಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವುದರ ಜೊತೆಗೆ, ಈ ಕುರಿತು ಪ್ರಸ್ತಾವಿತ 'ಕರ್ನಾಟಕ ಋತುಸ್ರಾವ ರಜೆ ಮತ್ತು ನೈರ್ಮಲ್ಯ ವಿಧೇಯಕ–2025' ಅನ್ನು ಶೀಘ್ರವಾಗಿ ಕಾನೂನಾಗಿ ರೂಪಿಸಲು ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ತಿಳಿಸಲಾಗಿದೆ.




# ಮೂರನೇ ಬಾರಿಗೆ ಚಾಂಪಿಯನ್ ಪಟ್ಟಕ್ಕೆ ಏರಿದ ಸಾಹೇ ವಿ.ವಿ. ವಾಲೀಬಾಲ್ ತಂಡ

ತುಮಕೂರು: ಸಾಹೇ ವಿಶ್ವವಿದ್ಯಾಲಯದ ವಾಲೀಬಾಲ್ ತಂಡವು ಬೆಂಗಳೂರಿನ ಶ್ರೀ ಸಪ್ತಗಿರಿ ವಿಶ್ವವಿದ್ಯಾಲಯ ಆಯೋಜಿಸಿದ್ದಂತಹ ರಾಷ್ಟ್ರೀಯ ಉಪನ್ಯಾಸಕರ ವಾಲೀಬಾಲ್ ಪಂದ್ಯಾವಳಿಯಲ್ಲಿ ಭಾಗವಹಿಸಿ ಮೊದಲ ಸ್ಥಾನವನ್ನು ಪಡೆದುಕೊಂಡರೆ. ಸಾಹೇ ವಿವಿಯ ಮಹಿಳೆಯರ ತಂಡವು ಥ್ರೋಬಾಲ್ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನವನ್ನು ಪಡೆದುಕೊಂಡಿದೆ. ಸಾಹೇ ವಿವಿಯ ವಾಲಿಬಾಲ್ ತಂಡವನ್ನು ದೈಹಿಕ ಶಿಕ್ಷಣ ನಿರ್ದೇಶಕ ರುದ್ರೇಶ್ ಕೆ ಆರ್ ರವರು ತಂಡವನ್ನು ಮುನ್ನಡೆಸಿದರೆ ನಿಖಿಲ್ ಗೌಡ ಭರತ್ ಮನೋಜ್ ಕಿರಣ್ ರೋಷನ್ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.. ಮಹಿಳೆಯರ ತ್ರೋಬಾಲ್ ತಂಡದಲ್ಲಿ ರಜನಿ ಸಿ.ಬಿ, ಅನ್ನಪೂರ್ಣ, ವಿನುತಾ, ಸುಜಾತ, ರಶ್ಮಿ, ಸಹನಾ, ತನುಶ್ರೀರವರುಗಳು ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ವಿಜೇತ ತಂಡಗಳಿಗೆ ಸಾಹೇವಿಶ್ವವಿದ್ಯಾಲಯದ ಕುಲಪತಿಗಳು, ಕುಲಸಚಿವರು ಕಾಲೇಜಿನ ಆಡಳಿತ ಮಂಡಳಿ ಹಾಗೂ ಬೋಧಕ ಮತ್ತು ಬೋಧಕೇತರ ವರ್ಗದವರು ಅಭಿನಂದಿಸಿದ್ದಾರೆ.. ಸಾಹೇ ವಿಶ್ವವಿದ್ಯಾಲಯ ವಾಲಿಬಾಲ್ ತಂಡವು ಸತತ ಎರಡು ತಿಂಗಳಲ್ಲಿ ಮೂರನೇ ಬಾರಿಗೆ ಚಾಂಪಿಯನ್ನಾಗಿ ಹೊರಹೊಮ್ಮಿದೆ.



# ಯುವ ಪೀಳಿಗೆಗೆ ಮಹನೀಯರ ಮತ್ತು ಸಾಧಕರ ವಿಚಾರಧಾರೆಗಳು ತುಂಬಾ ಪ್ರಸ್ತುತ

ದಾರಿ ತಪ್ಪುತ್ತಿರುವ ಇಂದಿನ ಯುವ ಪೀಳಿಗೆಗೆ ಮಹನೀಯರ ಮತ್ತು ಸಾಧಕರ ವಿಚಾರಧಾರೆಗಳು ತುಂಬಾ ಪ್ರಸ್ತುತವಾಗುತ್ತಿದ್ದು, ಈ ವಿಚಾರಧಾರೆಗಳ ಮನನದಿಂದಲೇ ಯುವ ಪೀಳಿಗೆಯನ್ನು ಸರಿ ದಾರಿಗೆ ತರುವ ಪ್ರಯತ್ನ ಮಾಡಬೇಕಿದೆ ಎಂದು ಲೇಖಕಿ ಬಾ.ಹ.ರಮಾಕುಮಾರಿ ತಿಳಿಸಿದರು.

ವರದಕ್ಷಿಣೆ ವಿರೋಧಿ ವೇದಿಕೆ–ಸಾಂತ್ವನ ಕೇಂದ್ರ ತುಮಕೂರಿನಲ್ಲಿ ಅಂಬೇಡ್ಕರ್ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಚಿಂತನೆ ಮತ್ತು ಸವಾಲುಗಳು ಕುರಿತು ಚರ್ಚೆ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದಿನ ಯುವ ಜನತೆಯ ನಡವಳಿಕೆಗಳನ್ನು ಗಮನಿಸಿದರೆ ಮುಂದೆ ನಮ್ಮ ಸಮಾಜ ಎಲ್ಲಿಗೆ ಹೋಗಿ ನಿಲ್ಲುತ್ತದೆ ಎಂಬ ಆತಂಕ ಎದುರಾಗುತ್ತದೆ. ಈ ನಿಟ್ಟಿನಲ್ಲಿ ಹಿರಿಯರ, ದಾರ್ಶನಿಕರ ವಿಚಾರಧಾರೆಗಳನ್ನು ಹೆಚ್ಚು ಹೆಚ್ಚು ಸಮಾಜಕ್ಕೆ ತಲುಪಿಸುವ ಪ್ರಯತ್ನಗಳು ನಿರಂತರವಾಗಿ ನಡೆಯಬೇಕು ಎಂದರು.

ಡಾ.ಬಿ.ಆರ್.ಅಂಬೇಡ್ಕರ್, ಬಾಬು ಜಗಜೀವನರಾಂ ಇಂತಹ ಮಹನೀಯರೆಲ್ಲ ಇಡೀ ಸಮಾಜದ ಒಳಿತಿಗೆ ತಮ್ಮ ಬದುಕು ಮೀಸಲಿಟ್ಟರು. ಆದರೆ ಈಗಿನ ಆಡಳಿತಗಾರರಲ್ಲಿ ಸಮಾಜದ ಭವಿಷ್ಯದ ದೃಷ್ಟಿಕೋನವೇ ಇಲ್ಲ. ಸ್ವಾರ್ಥಪರ ಬದುಕು ಮತ್ತು ವೈಯಕ್ತಿಕ ಲಾಲಸೆಯಿಂದಾಗಿ ಉತ್ತಮ ಸಮಾಜ ಮುಂದಿನ ದಿನಗಳಲ್ಲಿ ಮತ್ತಷ್ಟು ಹದಗೆಟ್ಟು ಹೋಗುವ ಆತಂಕ ನಮ್ಮ ಕಣ್ಣೆದುರು ಇದೆ. ಈ ಸಮಾಜವನ್ನು ರಕ್ಷಿಸುವ ಕೆಲಸ ಯುವಕರಿಂದ ಆಗಬೇಕಾಗಿದ್ದು, ಅವರಲ್ಲಿ ಕೆಟ್ಟ ಮನೋಭಾವ ತುಂಬುವ ಬದಲು ಒಳ್ಳೆಯ ವಿಚಾರ ಧಾರೆಗಳನ್ನು ತುಂಬಬೇಕಿದೆ ಎಂದು ಹೇಳಿದರು.




ಅಧ್ಯಕ್ಷತೆ ವಹಿಸಿದ್ದ ಲೇಖಕಿ ಎಂ.ಸಿ.ಲಲಿತ ಮಾತನಾಡಿ, ನಮ್ಮ ಸಮಾಜ ಬಹು ಜಾತಿ ಪದ್ಧತಿಯಿಂದಲೇ ಕೆಟ್ಟ ಹೆಸರು ಪಡೆದುಕೊಂಡಿದೆ. ಜಾತಿಯ ವಿಷ ಎಲ್ಲ ಕಡೆ ಪಸರಿಸಿದ್ದು, ಇದರಿಂದಾಗಿ ಮನಸ್ಸುಗಳು ಕೆಡುತ್ತಿವೆ. ಜಾತಿ, ಮತ, ಧರ್ಮ ಬಿಟ್ಟು ಮಾನವ ಕುಲದ ಬಗ್ಗೆ ಯೋಚಿಸಿದಾಗ ಸಮಾಜವನ್ನು ಉತ್ತಮ ಸ್ಥಿತಿಗೆ ತರಲು ಸಾಧ್ಯವಿದೆ ಎಂದು ತಿಳಿಸಿದರು.

ಈಗ ಎಲ್ಲ ಕಡೆಯೂ ಜಾತಿ ಸಂಘಟನೆಗಳು ತುಂಬಾ ಪ್ರಬಲವಾಗುತ್ತಿವೆ. ಇದು ಒಂದು ರೀತಿಯಲ್ಲಿ ಸಕಾರಾತ್ಮಕವಾದರೂಸಮಾಜದಅಭಿವೃದ್ಧಿಯದೃಷ್ಟಿಯಿಂದ ಒಳ್ಳೆಯದಂತೂ ಅಲ್ಲ. ನಾವೆಲ್ಲರೂ ಜಾತಿಯನ್ನು ಬದಿಗಿಟ್ಟು ಇಡೀ ಸಮಾಜದ ಬಗ್ಗೆ ಯೋಚಿಸಬೇಕಿದೆ. ಅಂಬೇಡ್ಕರ್ ಅವರೆಲ್ಲ ಹಾಗೆ ಯೋಚಿಸಿದ ಪರಿಣಾಮವಾಗಿಯೇ ಇಂದು ನಾವು ಒಂದು ಉತ್ತಮ ಸಂವಿಧಾನ ಪಡೆಯಲು ಸಾಧ್ಯವಾಯಿತು ಎಂದರು.ಸನ್ಮಾನ ಸ್ವೀಕರಿಸಿ ಮಾತನಾಡಿದ ಬಾಬು ಜಗಜೀವನರಾಂ ರಾಜ್ಯ ಪ್ರಶಸ್ತಿ ಪುರಸ್ಕೃತ ನರಸೀಯಪ್ಪ, ಮಂಡಿಪೇಟೆಯಲ್ಲಿ ಮೂಟೆ ಹೊತ್ತು ಬದುಕು ಸಾಗಿಸಿದ್ದ ನಾನು ಕ್ರಮೇಣ ಜನರ ಪ್ರೀತಿಯಿಂದ ನಗರ ಸಭೆಯ ಸದಸ್ಯನಾದೆ. ನನಗೆ ದೊರೆತ ಅಲ್ಪ ಅಧಿಕಾರದ ಅವಧಿಯಲ್ಲಿ ಸೂರು ಇಲ್ಲದವರಿಗೆ ಒಂದು ನೆಲೆ ಕಲ್ಪಿಸಲು ಪ್ರಯತ್ನಿಸಿದೆ. ಎಲ್ಲರ ಶ್ರಮದ ಫಲವಾಗಿ ಅಂಬೇಡ್ಕರ್ ನಗರ, ನಿರ್ವಾಣಿ ಲೇಔಟ್ ಇವೆಲ್ಲ ಸ್ಥಿರವಾಗಲು ಕಾರಣವಾಯಿತು ಎಂದು ಹೋರಾಟದ ದಿನಗಳನ್ನು ಸ್ಮರಿಸಿದರು.

ವರದಕ್ಷಿಣೆ ವಿರೋಧಿ ವೇದಿಕೆ ಪ್ರಧಾನ ಕಾರ್ಯದರ್ಶಿ ಸಾ.ಚಿ.ರಾಜಕುಮಾರ ಮಾತನಾಡಿ ಮಹಿಳೆಯರ ಸಬಲೀಕರಣ ಹಾಗೂ ಕಾನೂನುಗಳ ಉಗಮಕ್ಕೆ ಅಂಬೇಡ್ಕರ್ ಅವರ ಕೊಡುಗೆ ಅಪಾರವಿದೆ ಎಂದರು.

ವೇದಿಕೆಯ ಪದಾಧಿಕಾರಿಗಳಾದ ಎನ್.ಅಕ್ಕಮ್ಮ, ಮಮತ ರವಿಕುಮಾರ್, ಗಂಗಲಕ್ಷ್ಮಿ, ಸಾಂತ್ವನ ಕೇಂದ್ರದ ಪಾರ್ವತಮ್ಮ, ರಾಧಾಲಕ್ಷ್ಮಿ ಮಾಣಿಕ್ಯ ಇದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾ. ಕಾಂತಮ್ಮ ಹೃದಯಘಾತದಿಂದ ನಿಧನ

ಮಧುಗಿರಿ: ಪಟ್ಟಣದಲ್ಲಿರುವ ಅಧಿಕ ಹೆಚ್ಚುವರಿ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯದ ನ್ಯಾಯಾಧೀಶರಾದ ಕಾಂತಮ್ಮ ರವರು ಹೃದಯಘಾತದಿಂದ ಗುರುವಾರ ಬೆಳಗಿನ ಜಾವ ವಸತಿ ಗೃಹದಲ್ಲಿ ಮೃತಪಟ್ಟಿರುತ್ತಾರೆ



ಇವರು ಪಟ್ಟಣದ ಪಿಡಬ್ಲ್ಯೂಡಿ ಕ್ವಾಟ್ರಸ್ ನಲ್ಲಿ ಉಪ ವಿಭಾಗ ಅಧಿಕಾರಿಗಳ ನಿವಾಸದ ಹಿಂಭಾಗದ ಮನೆಯಲ್ಲಿ ವಾಸವಾಗಿದ್ದರು ಇವರೊಬ್ಬರೇ ವಾಸವಾಗಿದ್ದು ಇವರ ಜೊತೆ ಮನೆಯ ಕೆಲಸದಾಕೆ ಮಾತ್ರ ಇದ್ದರೂ ಎನ್ನಲಾಗಿದೆ. ಇವರಿಗೆ ಮೊದಲಿನಿಂದಲೂ ಲೋ ಬಿಪಿ ಅರೋಗ್ಯ ಸಮಸ್ಯೆ ಇತ್ತು ಎನ್ನಲಾಗಿದೆ.

ಕಾಂತಮ್ಮ ಬಿನ್ ನಾಗೇಗೌಡ ಅಂಚೆ ದೊಡ್ಡಿ ಮಳವಳ್ಳಿ ತಾಲೂಕು ಮಂಡ್ಯ ಜಿಲ್ಲೆ ಇವರು 2025 ಜೂನ್ ತಿಂಗಳಲ್ಲಿ ಮಧುಗಿರಿ ಅಧಿಕ ಸಿವಿಲ್ ಜಡ್ಜ್ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರಾಗಿ ಗುಂಡ್ಲುಪೇಟೆ ತಾಲೂಕಿನಿಂದ ವರ್ಗಾವಣೆಗೊಂಡು ಬಂದಿರುತ್ತಾರೆ 2018 ಸಾಲಿನಲ್ಲಿ ನ್ಯಾಯಾಧೀಶರಾಗಿ ನೇಮಕಗೊಂಡಿರುತ್ತಾರೆ ಮಧುಗಿರಿ ವಸತಿ ಗೃಹದಲ್ಲಿ ಗುರುವಾರ ಬೆಳಗಿನ ಜಾವ ಯಾವುದೋ ಸಮಯದಲ್ಲಿ ಹೃದಯಘಾತವಾಗಿರುವ ಬಗ್ಗೆ ತಿಳಿದು ಬಂದಿರುತ್ತದೆ ಇವರಿಗೆ ಮೊದಲಿನಿಂದಲೂ ಲೋ ಬಿಪಿ ಯಾಗುವ ಸಮಸ್ಯೆ ಇರುತ್ತದೆ .ಮೃತರ ಸಂಬಂಧಿಕರು ಮೃತದೇಹವನ್ನು ಅವರ ಸ್ವಗ್ರಾಮಕ್ಕೆ ತೆಗೆದುಕೊಂಡು ಹೋಗುವುದಾಗಿ ಮಾಹಿತಿಯಿಂದ ತಿಳಿದ ಬಂದಿರುತ್ತದೆ.

ವಸತಿ ಗೃಹಕ್ಕೆ ಮಧುಗಿರಿಯ ನ್ಯಾಯಾಧೀಶರುಗಳು ಹಾಗೂ ಪೊಲೀಸ್ ಇಲಾಖೆಯವರು ಹಾಗೂ ವಕೀಲರ ಸಂಘದ ಅಧ್ಯಕ್ಷ ಪಿ.ಸಿ. ಕೃಷ್ಣಾರೆಡ್ಡಿ ಹಾಗೂ ವಕೀಲರ ತಂಡ ಭೇಟಿ ನೀಡಿ ಮೃತರ ಅಂತಿಮ ದರ್ಶನ ಪಡೆದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . CONTACT : 9901010109 GMAIL: suryapragathi2021@gmail.com.